ಸಂಪುಟ: 11 ಸಂಚಿಕೆ: 201 ಪುಟಗಳು: 4+2 ಬೆಲೆ: ₹ 3.00 ಸೋಮವಾರ, ಸೆಪ್ಟೆಂಬರ್ 14, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 201 Pages : 4+2 Rate : 3.00 Monday, September 14, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22



**ನಮ್ಮೆಲ್ಲ ಓದುಗರು, ಜಾಹೀರಾತುದಾರರು, ಪತ್ರಿಕೆ ಏಜೆಂಟರು, ಹಿತೈಶಿಗಳಿಗೆ ಗಣೇಶ ಚತುರ್ಥಿಯ ಹಾರ್ದಿಕ ಶುಭಾಶಯಗಳು. ವಿಘ್ನ ನಿವಾರಕನಾದ ಗಜಮುಖನು ಸಕಲರಿಗೂ ಸನ್ಮಂಗಳವನ್ನುಂಟುಮಾಡಲಿ.**
**ಗಣೇಶ ಚತುರ್ಥಿ ನಿಮಿತ್ತ ಸೆಪ್ಟೆಂಬರ್ 14ರಂದು ನಮ್ಮ ಕಾರ್ಯಾಲಯಕ್ಕೆ ಬಿಡುವು ಇರುವುದರಿಂದ ಮಂಗಳವಾರ ಸಂಚಿಕೆ ಪ್ರಕಟವಾಗುವುದಿಲ್ಲ.**
**- ಸಂಪಾದಕ**

## ತಾಂತ್ರಿಕ ವರದಿ, ಸಾರ್ವಜನಿಕ ಸಮಾಲೋಚನೆ ಇಲ್ಲದೆ ಕಾಮಗಾರಿ: ಅನಿಲ ಮೆಣಸಿನಕಾಯಿ ಆರೋಪ

# ಕ್ರೀಡಾಂಗಣ ಉಳಿಸಿ, ಕಾಮಗಾರಿ ನಿಲ್ಲಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕ್ರೀಡಾಂಗಣದಲ್ಲಿ ಸಮಗ್ರ ತಾಂತ್ರಿಕ ಅಭಿಪ್ರಾಯ, ಸಾರ್ವಜನಿಕ ಸಮಾಲೋಚನೆ ಹಾಗೂ ವಿವಿಧ ಕ್ರೀಡಾ ಸಂಘಟನೆಗಳ ಒಪ್ಪಿಗೆ ಪಡೆಯದೆ ಫುಟ್‌ಬಾಲ್‌ಗೆ ಸಂಬಂಧಿಸಿದ ಟ್ರ್ಯಾಕ್ ವಿಶೇಷ ಕಾಮಗಾರಿ ಕೈಗೊಳ್ಳಲು ಮುಂದಾಗಿರುವುದು ಖಂಡನೀಯ. ಅವೈಜ್ಞಾನಿಕ ಕಾಮಗಾರಿಯಿಂದ ಕ್ರೀಡಾಂಗಣದ ಮೂಲಸ್ವರೂಪವೇ ಹಾಳಾಗುವ ಅಪಾಯವಿದೆ ಎಂದು ಗದಗ ವಿಧಾನಸಭಾ ಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ಅನಿಲ ಮೆಣಸಿನಕಾಯಿ ಆರೋಪಿಸಿದ್ದಾರೆ.

ಜಿಲ್ಲಾ ಕ್ರೀಡಾಂಗಣ ಯಾರೊಬ್ಬರ ವೈಯಕ್ತಿಕ ಆಸ್ತಿಯಲ್ಲ. ಜಿಲ್ಲೆಯ ಕ್ರೀಡಾಪಟುಗಳು, ವಿದ್ಯಾರ್ಥಿಗಳ, ಹಿರಿಯ ನಾಗರಿಕರು ಹಾಗೂ ಸಾರ್ವಜನಿಕರ ಬಳಕೆಯಲ್ಲಿರುವ ಸಾರ್ವಜನಿಕ ಆಸ್ತಿಯಾಗಿದೆ. ಕ್ರಿಕೆಟ್, ಅಥ್ಲೆಟಿಕ್ಸ್, ಫುಟ್‌ಬಾಲ್ ಸೇರಿದಂತೆ ವಿವಿಧ ಕ್ರೀಡಾಕೂಟಗಳು, ಸರಕಾರಿ ಕಾರ್ಯಕ್ರಮಗಳು ಹಾಗೂ ಸಾರ್ವಜನಿಕ ಸಮಾರಂಭಗಳು ಇಲ್ಲಿ ನಡೆಯುತ್ತವೆ. ಪ್ರತಿದಿನ ನೂರಾರು ನಾಗರಿಕರು ಬೆಳಗಿನ ನಡಿಗೆ ಮತ್ತು ವ್ಯಾಯಾಮಕ್ಕಾಗಿ ಕ್ರೀಡಾಂಗಣ ಬಳಸುತ್ತಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಗಸ್ಟ್ 15ರ ಸ್ವಾತಂತ್ರ್ಯ ದಿನಾಚರಣೆ, ಜನವರಿ 26ರ ಗಣರಾಜ್ಯೋತ್ಸವ, ನವೆಂಬರ್ 1ರ ಕರ್ನಾಟಕ ರಾಜ್ಯೋತ್ಸವ, ಶಾಲಾ–ಕಾಲೇಜುಗಳ ಕ್ರೀಡಾಕೂಟಗಳು, ಪೊಲೀಸ್ ಹಾಗೂ ಸರ್ಕಾರಿ ಇಲಾಖೆಗಳ ಪಥಸಂಚಲನ ಸೇರಿದಂತೆ ವಿವಿಧ ಕಾರ್‍ಯಕ್ರಮಗಳಿಗೆ ಉದ್ದೇಶಿತ ಕಾಮಗಾರಿಯಿಂದ ತೊಂದರೆಯಾಗುವ ಸಾಧ್ಯತೆಯಿದೆ. ಒಂದು ಕ್ರೀಡೆಗಾಗಿ ಇಡೀ



ಜಿಲ್ಲಾ ಕ್ರೀಡಾಂಗಣದ ಬಹುಉಪಯೋಗಿ ಸ್ವರೂಪವನ್ನು ಬದಲಿಸುವುದು ಯಾವ ನ್ಯಾಯ? ಎಂದು ಪ್ರಶ್ನಿಸಿದ್ದಾರೆ.

ಈ ಹಿಂದೆ ಇದೇ ಕ್ರೀಡಾಂಗಣದಲ್ಲಿ ಯಶಸ್ವಿಯಾಗಿ ಕ್ರಿಕೆಟ್ ಕಾರ್ಯಕ್ರಮ ಆಯೋಜಿಸಿದ್ದೆವು. ಅದಕ್ಕೆ ಪ್ರತಿಯಾಗಿ ರಾಜಕೀಯ ಪ್ರತಿಷ್ಠೆ ಹಾಗೂ ಪೈಪೋಟಿಯ ಕಾರಣದಿಂದ ಶಾಸಕರು ಮತ್ತು ಅವರ ಪುತ್ರರ ಪ್ರಭಾವದಲ್ಲಿ ಫುಟ್‌ಬಾಲ್ ಕಾರ್ಯಕ್ರಮಕ್ಕಾಗಿ ಕಾಮಗಾರಿ ರೂಪಿಸಲಾಗಿದೆ ಎಂಬ ಗಂಭೀರ ಅನುಮಾನ ಸರ್ವಜನಿಕ ವಲಯದಲ್ಲಿದೆ. ಈ ಆರೋಪದ ಸತ್ಯಾಸತ್ಯತೆಯನ್ನು ಸ್ವತಂತ್ರ ತನಿಖೆಯಿಂದ ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಫುಟ್‌ಬಾಲ್ ಆಟಗಾರರ ವಿರುದ್ಧ ಯಾವುದೇ ವಿರೋಧವಿಲ್ಲ. ಅವರಿಗೆ ಪ್ರತ್ಯೇಕ, ವೈಜ್ಞಾನಿಕ ಹಾಗೂ ಸುಸಜ್ಜಿತ ಫುಟ್‌ಬಾಲ್ ಕ್ರೀಡಾಂಗಣ ಕಲ್ಪಿಸಬೇಕು. ಆದರೆ ಒಂದು ಕ್ರೀಡೆಗಾಗಿ ಜಿಲ್ಲಾ ಕ್ರೀಡಾಂಗಣದ ಇತರ ಚಟುವಟಿಕೆಗಳನ್ನು

> ಫುಟ್‌ಬಾಲ್ ಆಟಗಾರರ ವಿರುದ್ಧ ನಮ್ಮ ವಿರೋಧವಿಲ್ಲ. ಆದರೆ ಒಂದು ಕ್ರೀಡೆಗಾಗಿ ಜಿಲ್ಲೆಯ ಎಲ್ಲ ಕ್ರೀಡಾಪಟುಗಳು ಹಾಗೂ ಸಾರ್ವಜನಿಕರು ಬಳಸುವ ಬಹುಉಪಯೋಗಿ ಕ್ರೀಡಾಂಗಣದ ಸ್ವರೂಪ ಹಾಳುಮಾಡುವುದನ್ನು ಒಪ್ಪುವುದಿಲ್ಲ. ಲೋಕಾಯುಕ್ತರು ಸ್ವಯಂಪ್ರೇರಿತವಾಗಿ ತನಿಖೆ ನಡೆಸಿ ಸತ್ಯವನ್ನು ಬಹಿರಂಗಪಡಿಸಬೇಕು.
> **– ಅನಿಲ ಮೆಣಸಿನಕಾಯಿ**

ಬಲಿಕೊಡುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದಿದ್ದಾರೆ.

ಕಾಮಗಾರಿ ಆರಂಭಿಸುವ ಮುನ್ನ ಮಣ್ಣು, ನೀರು ಹರಿವು ಹಾಗೂ ಕ್ರೀಡಾಂಗಣದ ಸಾಮಾರ್ಥ್ಯ, ವೈಜ್ಞಾನಿಕ ಪರೀಕ್ಷೆ ನಡೆಸಲಾಗಿದೆಯೇ? ಕ್ರೀಡಾಂಗಣ ತಜ್ಞರು ಹಾಗೂ ಸಿವಿಲ್ ಎಂಜಿನಿಯರ್‌ಗಳಿಂದ ತಾಂತ್ರಿಕ ವರದಿ ಪಡೆಯಲಾಗಿದೆಯೇ? ಕ್ರಿಕೆಟ್, ಅಥ್ಲೆಟಿಕ್ಸ್ ಸೇರಿದಂತೆ ಎಲ್ಲ ಕ್ರೀಡಾ ಸಂಘಟನೆಗಳ ಅಭಿಪ್ರಾಯ ಪಡೆಯಲಾಗಿದೆಯೇ? ಬೆಳಗಿನ ನಡಿಗೆ ಮಾಡುವ ನಾಗರಿಕರು ಹಾಗೂ ಸಾರ್ವಜನಿಕರೊಂದಿಗೆ ಸಮಾಲೋಚನೆ ನಡೆಸಲಾಗಿದೆಯೇ?

ಕಾಮಗಾರಿಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆ ನೀಡಿದವರು ಯಾರು? ಟೆಂಡರ್ ಪ್ರಕ್ರಿಯೆ ಪಾರದರ್ಶಕವಾಗಿದೆಯೇ? ಅಂದಾಜು ಮೊತ್ತ,

ಗುತ್ತಿಗೆದಾರರ ಹೆಸರು ಹಾಗೂ ಹಣದ ಮೂಲವನ್ನು ಸಾರ್ವಜನಿಕಗೊಳಿಸಲಾಗಿದೆಯೇ? ರಾಷ್ಟ್ರೀಯ ದಿನಾಚರಣೆಗಳ ಸರಕಾರಿ ಕಾರ್ಯಕ್ರಮಗಳಿಗೆ ತೊಂದರೆಯಾಗುವುದಿಲ್ಲ ಎಂಬ ಲಿಖಿತ ಪ್ರಮಾಣಪತ್ರವಿದೆಯೇ ಎಂಬ ಪ್ರಶ್ನೆಗಳಿಗೆ ಜಿಲ್ಲಾಡಳಿತ ತಕ್ಷಣ ಉತ್ತರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಸಮರ್ಪಕ ತಾಂತ್ರಿಕ ಅಭಿಪ್ರಾಯವಿಲ್ಲದೆ ಹಾಗೂ ಸಾರ್ವಜನಿಕ ಹಿತಾಸಕ್ತಿಯನ್ನು ಕಡೆಗಣಿಸಿ ಆತುರದಲ್ಲಿ ಕಾಮಗಾರಿ ನಡೆಸುತ್ತಿರುವುದನ್ನು ಗಮನಿಸಿದರೆ ಭಾರೀ ಹಣಕಾಸು ಅವ್ಯವಹಾರ ಮತ್ತು ಭ್ರಷ್ಟಾಚಾರದ ಸಾಧ್ಯತೆ ಕುರಿತು ಅನುಮಾನ ಮೂಡುತ್ತದೆ. ಕರ್ನಾಟಕ ಲೋಕಾಯುಕ್ತರು ಸ್ವಯಂಪ್ರೇರಿತವಾಗಿ ಪ್ರಕರಣ ಪರಿಗಣಿಸಿ ಯೋಜನೆಯ ಅನುಮೋದನೆ, ಅಂದಾಜು ವೆಚ್ಚ, ಟೆಂಡರ್, ಗುತ್ತಿಗೆ, ಹಣ ಬಿಡುಗಡೆ ಹಾಗೂ ರಾಜಕೀಯ ಪ್ರಭಾವದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ಜಿಲ್ಲಾಡಳಿತವು ಆಕ್ಷೇಪಗಳನ್ನು ನಿರ್ಲಕ್ಷಿಸಿ ಕಾಮಗಾರಿ ಮುಂದುವರಿಸಿದರೆ ಸಾರ್ವಜನಿಕ ಆಸ್ತಿಯ ರಕ್ಷಣೆಗೆ ಕಾನೂನು ಹೋರಾಟ, ಶಾಂತಿಯುತ ಪ್ರತಿಭಟನೆ, ಜನಜಾಗೃತಿ ಅಭಿಯಾನ ಹಾಗೂ ಸಂಬಂಧಪಟ್ಟ ತನಿಖಾ ಸಂಸ್ಥೆಗಳಿಗೆ ದೂರು ಸಲ್ಲಿಸುವುದು ಸೇರಿದಂತೆ ಪ್ರಜಾಪ್ರಭುತ್ವದ ಎಲ್ಲ ಮಾರ್ಗಗಳಲ್ಲಿ ಹೋರಾಟ ನಡೆಸಲು ಸಿದ್ಧರಾಗಿರುವುದಾಗಿ ತಿಳಿಸಿದ್ದಾರೆ.

### ಪ್ರಮುಖ ಬೇಡಿಕೆಗಳು

ಉದ್ದೇಶಿತ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಬೇಕು.
ತನಿಖೆ ಪೂರ್ಣಗೊಳ್ಳುವವರೆಗೆ ಯಾವುದೇ ಕಾಮಗಾರಿಗೆ ಅವಕಾಶ ನೀಡಬಾರದು.
ಯೋಜನಾ ವರದಿ, ನಕ್ಷೆ, ಅಂದಾಜು ವೆಚ್ಚ ಹಾಗೂ ಟೆಂಡರ್ ದಾಖಲೆಗಳನ್ನು ಸಾರ್ವಜನಿಕಗೊಳಿಸಬೇಕು.
ಕ್ರೀಡಾ ತಜ್ಞರು, ಎಂಜಿನಿಯರ್‌ಗಳು ಹಾಗೂ ಎಲ್ಲ ಕ್ರೀಡಾ ಸಂಘಟನೆಗಳೊಂದಿಗೆ ಬಹಿರಂಗ ಸಭೆ ನಡೆಸಬೇಕು.
ಕ್ರೀಡಾಂಗಣಕ್ಕೆ ಹಾನಿಯಾಗುವುದಿಲ್ಲ ಎಂಬುದನ್ನು ಸ್ವತಂತ್ರ ತಜ್ಞರ ಸಮಿತಿ ದೃಢಪಡಿಸಬೇಕು.
ಫುಟ್‌ಬಾಲ್ ಆಟಗಾರರಿಗೆ ಪರ್ಯಾಯ ಸ್ಥಳದಲ್ಲಿ ಪ್ರತ್ಯೇಕ, ವೈಜ್ಞಾನಿಕ ಹಾಗೂ ಸುಸಜ್ಜಿತ ಕ್ರೀಡಾಂಗಣ ನಿರ್ಮಿಸಬೇಕು.
ರಾಜಕೀಯ ಅಥವಾ ವೈಯಕ್ತಿಕ ಪ್ರತಿಷ್ಠೆಗಾಗಿ ಸಾರ್ವಜನಿಕ ಆಸ್ತಿಯ ದುರುಪಯೋಗ ನಿಲ್ಲಿಸಬೇಕು.

## ಸೌರ ವಿದ್ಯುತ್ ಘಟಕ ಲೋಕಾರ್ಪಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ಭಾನುವಾರ ಗದಗದ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಅಳವಡಿಸಲಾಗಿರುವ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳು ಹಾಗೂ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಲೋಕಾರ್ಪಣೆ ಮಾಡಿದರು.

ಆಸ್ಪತ್ರೆಯ ವೈದ್ಯಕೀಯ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ವಿವಿಧ ವಿಭಾಗಗಳಿಗೆ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಅಳವಡಿಸಲಾಗಿದ್ದು, ವಿದ್ಯುತ್ ಅಗತ್ಯತೆಯನ್ನು ಪೂರೈಸಲು ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲಾಗಿದೆ.

ಈ ಸಂದರ್ಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್., ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ, ಡಾ.ಕರಿಗೌಡ್ರ, ಡಾ.ರಾಘವೇಂದ್ರ ಸೇರಿದಂತೆ ಅಧಿಕಾರಿಗಳು ಹಾಗೂ ವೈದ್ಯರು ಉಪಸ್ಥಿತರಿದ್ದರು.

## ಆದರ್ಶ ಮೌಲ್ಯಗಳಿಗೆ ರೈತರೇ ಪ್ರತಿರೂಪ: ಅನಿಲ ಮೆಣಸಿನಕಾಯಿ

**ವಿಜಯಸಾಕ್ಷಿ ಸುದ್ದಿ, ಗದಗ**

ಧಾರ್ಮಿಕ ಕಾರ್ಯಕ್ರಮಗಳಲ್ಲಿ ರಾಜಕಾರಣಿಗಳು ಭಾಗವಹಿಸುವುದರಿಂದ ರಾಜಕೀಯದಲ್ಲೂ ನ್ಯಾಯ, ನೀತಿ ಹಾಗೂ ಧರ್ಮದ ಮೌಲ್ಯಗಳನ್ನು ಅನುಸರಿಸಲು ಸಾಧ್ಯವಾಗುತ್ತದೆ ಎಂದು ಗದಗ ವಿಧಾನಸಭಾ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಅನಿಲ ಮೆಣಸಿನಕಾಯಿ ಹೇಳಿದರು.

ತಾಲೂಕಿನ ಹಿರೇಹಂದಿಗೋಳ ಗ್ರಾಮದಲ್ಲಿ ನಡೆದ ಶರಣ ಬಸವೇಶ್ವರ 41ನೇ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬರಗಾಲದ ನಡುವೆಯೂ ಪುರಾಣ ಪ್ರವಚನ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿರುವುದು ಗಮನಾರ್ಹ ಎಂದರು. ಎಷ್ಟೇ ಬರಗಾಲವಿದ್ದರೂ ಧಾರ್ಮಿಕ ಕಾರ್ಯಕ್ರಮಗಳಿಗೆ ರೈತರು ದಾನ–ಧರ್ಮದಲ್ಲಿ ಎಂದಿಗೂ ಹಿಂದೆ ಬೀಳುವುದಿಲ್ಲ. ಈ ಹಿಂದೆ ಕೋವಿಡ್ ಸಂದರ್ಭದಲ್ಲಿ ಜೋಳಿಗೆ ಕಾರ್ಯಕ್ರಮ ಹಮ್ಮಿಕೊಂಡಾಗ ಹಿರೇಹಂದಿಗೋಳ ಗ್ರಾಮಸ್ಥರು ದವಸ–ಧಾನ್ಯಗಳನ್ನು ನೀಡಿ ಹಸಿದವರ ಹೊಟ್ಟೆ ತುಂಬಿಸುವ ಕಾರ್ಯ ಮಾಡಿದ್ದರು. ಈ ಮೂಲಕ ಆದರ್ಶ ಮೌಲ್ಯಗಳು ಇಂದಿಗೂ ಸಮಾಜದಲ್ಲಿ ಜೀವಂತವಾಗಿವೆ ಎಂಬುದನ್ನು ರೈತರು ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು.

ಅಭಿನವ ಭೂದೀಶ್ವರ ಶ್ರೀಗಳು ಮಾತನಾಡಿ, ಬದುಕಿಗೆ ಎಲ್ಲವೂ ಬೇಕು. ಎಲ್ಲವೂ ಬೇಕು ಎಂದಾಗ ಅನ್ಯಾಯದ ಮಾರ್ಗದಲ್ಲಿ ಗಳಿಸದೆ ನ್ಯಾಯದ ಮಾರ್ಗದಲ್ಲಿ ಸಂಪಾದಿಸಬೇಕು. ಆಗ ಮಾತ್ರ ಆನಂದದಿಂದ ಬದುಕಲು ಸಾಧ್ಯ ಎಂದರು.

ಸುಖವಿದ್ದಾಗ ನಮ್ಮನ್ನೇ ನಾವು ಮರೆತು, ದುಃಖ ಬಂದಾಗ ಮಾತ್ರ ದೇವರನ್ನು ನೆನೆಯುತ್ತೇವೆ. ಕಷ್ಟ–ಸುಖ ಎಲ್ಲವನ್ನೂ ದೇವರು ನೀಡಿದ್ದಾನೆ.

ಆದ್ದರಿಂದ ಎಲ್ಲ ಕಾಲದಲ್ಲೂ ದೇವರ ಕೃಪೆಗೆ ಪಾತ್ರರಾಗಬೇಕು. ದೇವರನ್ನು ಕೇವಲ ಅನುಕೂಲಕ್ಕಾಗಿ ಪ್ರೀತಿಸಬಾರದು. ಮನುಷ್ಯ ದೇವನಾಗಲು ಸಾಧ್ಯವಿಲ್ಲ; ಆದರೆ ದೇವರ ಪ್ರೀತಿಗೆ ಪಾತ್ರನಾಗಬಹುದು. ಮನುಷ್ಯ ಭೂತನಾಗುವತ್ತ ಸಾಗುತ್ತಿರುವುದು ಇಂದಿನ ಕಲಿಗಾಲದ ಉದಾಹರಣೆಯಾಗಿದೆ ಎಂದು ಶ್ರೀಗಳು ಹೇಳಿದರು. ಯುವ ಮುಖಂಡರಾದ ವಸಂತ ಪಡಗದ, ಸಿದ್ದು ಪಲ್ಲೇದ ಸೇರಿದಂತೆ ಹಿರೇಹಂದಿಗೋಳ ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಆರೋಗ್ಯ ಸಚಿವ ಯು.ಟಿ.ಖಾದರ್‌ಗೆ ಕನ್ನಡಪರ ಸಂಘಟನೆಗಳು, ನಾಗರಿಕರಿಂದ ಮನವಿ

# ತಾಲೂಕು ಆಸ್ಪತ್ರೆ ಮೇಲ್ದರ್ಜೆಗೇರಿಸಲು ಆಗ್ರಹ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

35 ವರ್ಷಗಳಿಂದ ಕೇವಲ 30 ಹಾಸಿಗೆಗಳಲ್ಲೇ ಕಾರ್ಯನಿರ್ವಹಿಸುತ್ತಿರುವ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರವನ್ನು ತಾಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸುವಂತೆ ಕನ್ನಡಪರ ಸಂಘಟನೆಗಳು ಹಾಗೂ ನಾಗರಿಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಅವರಿಗೆ ಭಾನುವಾರ ಮನವಿ ಸಲ್ಲಿಸಿದರು.

ಆರೋಗ್ಯ ಸಚಿವರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಇದೇ ಮೊದಲ ಬಾರಿಗೆ ಲಕ್ಷ್ಮೇಶ್ವರಕ್ಕೆ ಆಗಮಿಸಿದ್ದ ಸಚಿವರಿಗೆ, ಪಟ್ಟಣದ ಸೋಮೇಶ್ವರ ದೇವಸ್ಥಾನ ಹಾಗೂ ದೂದಪೀರಾಂ ದರ್ಗಾಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮನವಿ ಸಲ್ಲಿಸಲಾಯಿತು. ಮನವಿ ಸ್ವೀಕರಿಸಿದ ಸಚಿವರು, ಆಸ್ಪತ್ರೆ ಮೇಲ್ದರ್ಜೆಗೇರಿಸುವ ವಿಚಾರಕ್ಕೆ ಮೊದಲ ಆದ್ಯತೆ ನೀಡಿ ಅಗತ್ಯ ಕ್ರಮ ಕೈಗೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಲಕ್ಷ್ಮೇಶ್ವರ ತಾಲೂಕು ಕೇಂದ್ರವಾಗಿ ಒಂಬತ್ತು ವರ್ಷ ಕಳೆದಿದ್ದು, ಸಮುದಾಯ ಆರೋಗ್ಯ ಕೇಂದ್ರಕ್ಕೆ ಪ್ರತಿದಿನ 400ಕ್ಕೂ ಹೆಚ್ಚು ರೋಗಿಗಳು ಚಿಕಿತ್ಸೆಗಾಗಿ ಆಗಮಿಸುತ್ತಿದ್ದಾರೆ. ಸುತ್ತಮುತ್ತಲಿನ ನಾಲ್ಕು ತಾಲೂಕುಗಳ ಜನರೂ ಆರೋಗ್ಯ ಸೇವೆಗಾಗಿ ಇಲ್ಲಿಗೆ ಅವಲಂಬಿತರಾಗಿದ್ದಾರೆ. ಆದರೆ, ಆಸ್ಪತ್ರೆಯಲ್ಲಿ ತಜ್ಞ ವೈದ್ಯರು, ಹಾಸಿಗೆಗಳು ಹಾಗೂ ಅಗತ್ಯ ವೈದ್ಯಕೀಯ ಸೌಲಭ್ಯಗಳ ಕೊರತೆಯಿಂದ ಗಂಭೀರ ಪ್ರಕರಣಗಳನ್ನು ಗದಗ, ಹುಬ್ಬಳ್ಳಿ–ಧಾರವಾಡ ಸೇರಿದಂತೆ ದೂರದ ಆಸ್ಪತ್ರೆಗಳಿಗೆ ಕಳುಹಿಸುವ ಅನಿವಾರ್ಯತೆ ಎದುರಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಆಸ್ಪತ್ರೆಯನ್ನು ತಾಲೂಕು ಮಟ್ಟದ



ಸಾರ್ವಜನಿಕ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಿ ಹೆಚ್ಚುವರಿ ಹಾಸಿಗೆಗಳ ವ್ಯವಸ್ಥೆ ಮಾಡಬೇಕು. ತಜ್ಞ ವೈದ್ಯರು ಹಾಗೂ ಅಗತ್ಯ ವೈದ್ಯಕೀಯ ಸಿಬ್ಬಂದಿಯನ್ನು ನೇಮಕ ಮಾಡಬೇಕು. ತುರ್ತು ಚಿಕಿತ್ಸೆ, ಶಸ್ತ್ರಚಿಕಿತ್ಸೆ, ಹೆರಿಗೆ ಹಾಗೂ ಮಕ್ಕಳ ಚಿಕಿತ್ಸಾ ವಿಭಾಗಗಳನ್ನು ಬಲಪಡಿಸುವ ಮೂಲಕ ಲಕ್ಷ್ಮೇಶ್ವರದಲ್ಲೇ ಸಮರ್ಪಕ ಹಾಗೂ ಸುಸಜ್ಜಿತ ಆರೋಗ್ಯ ಸೇವೆ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಹಾವೇರಿ ಲೋಕಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಹಾಗೂ ಯುವ ಮುಖಂಡ ಆನಂದ ಗಡ್ಡದೇವರಮಠ ಮತ್ತು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಗದಗ ಜಿಲ್ಲಾಧ್ಯಕ್ಷ ಶರಣು ಗೋಡಿ ಅವರು ಆಸ್ಪತ್ರೆಯ ಅಗತ್ಯತೆ ಕುರಿತು ಸಚಿವರಿಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜೈನ ಸಮಾಜದ ಮುಖಂಡ ಪದ್ಮರಾಜ ಪಾಟೀಲ ಅವರು ಐತಿಹಾಸಿಕ ಶಂಖ ಬಸದಿ ಜೀರ್ಣೋದ್ಧಾರ ಹಾಗೂ ಸಮುದಾಯ ಭವನ ನಿರ್ಮಾಣಕ್ಕೆ ಅನುದಾನ ನೀಡುವಂತೆ ಸಚಿವರಿಗೆ ಮನವಿ ಸಲ್ಲಿಸಿದರು.

> ತಾಲೂಕು ಕೇಂದ್ರವಾಗಿ ಒಂಬತ್ತು ವರ್ಷ ಕಳೆದಿರುವ ಲಕ್ಷ್ಮೇಶ್ವರದಲ್ಲಿ ಜನಸಂಖ್ಯೆ ಹಾಗೂ ರೋಗಿಗಳ ಸಂಖ್ಯೆ ಹೆಚ್ಚಾಗಿದೆ. 30 ಹಾಸಿಗೆಗಳ ವ್ಯವಸ್ಥೆಯಲ್ಲಿ 400ಕ್ಕೂ ಹೆಚ್ಚು ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ನೀಡುವುದು ಕಷ್ಟವಾಗಿದ್ದು, ತಾಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸುವುದು ಅತ್ಯಗತ್ಯವಾಗಿದೆ.
> **–ಆನಂದ ಗಡ್ಡದೇವರಮಠ, ಯುವ ಮುಖಂಡ**

ಈ ವೇಳೆ ಟಿ.ಈಶ್ವರ, ಎಸ್.ಪಿ.ಬಳಿಗಾರ, ಗುರುನಾಥ ದಾನಪ್ಪನವರ, ಜಿ.ವಿ.ಪಾಟೀಲ, ಮಹೇಶ ಲಮಾಣಿ, ದೀಪಕ ಲಮಾಣಿ, ರಾಜು ಪಾಟೀಲ, ಜಿ.ಆರ್.ಕೊಪ್ಪದ, ನಾಗರಾಜ ಮಡಿವಾಳರ, ಯಲ್ಲಪ್ಪ ತಳವಾರ, ರಾಜು ಕುಂಬಿ, ಅಂಬರೀಶ ತೆಂಬದಮನಿ, ವಿರೂಪಾಕ್ಷ ನಂದೆಣ್ಣವರ, ಸೋಮಣ್ಣ ಬೆಟಗೇರಿ, ಎಂ.ಎಂ.ಗಾಡಗೋಳಿ, ಮುತ್ತಣ್ಣ ಗಡೆಪ್ಪನವರ, ಪರಮೇಶ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಾಮರಸ್ಯವೇ ಯಶಸ್ವಿ ನಾಯಕತ್ವದ ಮಾನದಂಡ: ಯು.ಟಿ. ಖಾದರ್

# ಧರ್ಮಭೇದ ಮರೆತು ಮಕ್ಕಳ ಕೈಹಿಡಿಯುವ ಸಮಾಜ ನಿರ್ಮಾಣವಾಗಲಿ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿಂದೂ, ಮುಸ್ಲಿಂ, ಕ್ರೈಸ್ತ, ಜೈನ ಸೇರಿದಂತೆ ವಿವಿಧ ಧರ್ಮಗಳ ಮಕ್ಕಳು ಯಾವುದೇ ಭೇದಭಾವವಿಲ್ಲದೆ ಕೈಕೈ ಹಿಡಿದು ಓಡಾಡುವಂತಹ ಸಾಮರಸ್ಯದ ಸಮಾಜ ನಿರ್ಮಾಣವಾಗಬೇಕು. ಕ್ಷೇತ್ರದಲ್ಲಿ ಇಂತಹ ವಾತಾವರಣ ನಿರ್ಮಿಸಲು ಆದ್ಯತೆ ನೀಡುವ ಜನಪ್ರತಿನಿಧಿಯೇ ನಿಜವಾದ ಅರ್ಥದಲ್ಲಿ ಯಶಸ್ವಿ ನಾಯಕನಾಗಬಲ್ಲರು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೇಳಿದರು.

ಪಟ್ಟಣದ ಭಾವೈಕ್ಯತೆಯ ಕೇಂದ್ರ ಹಜರತ್ ಸಯ್ಯದ್ ಸುಲೇಮಾನ್ ಬಾದಷಾ ಖಾದ್ರಿ (ದೂದನಾನಾ) ದರ್ಗಾಕ್ಕೆ ಭಾನುವಾರ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದ ಬಳಿಕ ಶಾದಿಮಹಲ್‌ನಲ್ಲಿ ದರ್ಗಾ ಕಮಿಟಿ, ಅಂಜುಮನ್ ಕಮಿಟಿ ಹಾಗೂ ವಿವಿಧ ಸಮಾಜಗಳ ವತಿಯಿಂದ ನಡೆದ ನಾಗರಿಕ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಭಾವೈಕ್ಯತೆಗೆ ಮತ್ತೊಂದು ಹೆಸರು ಲಕ್ಷ್ಮೇಶ್ವರ. ಈ ನೆಲದಲ್ಲಿ ನಡೆದಾಡಿದ ದೇವಮಾನವರು 'ಮಾನವ ಧರ್ಮಕ್ಕೆ ಜಯವಾಗಲಿ, ದ್ವೇಷ ಬಿಡು, ಪ್ರೀತಿ ಮಾಡು' ಎಂಬ ಸಾರ್ವಕಾಲಿಕ ಸಂದೇಶ ನೀಡಿದ್ದಾರೆ. ಇಲ್ಲಿನ ಜನರು ಪ್ರೀತಿ ಮತ್ತು ವಿಶ್ವಾಸದಿಂದ ಬದುಕುತ್ತಿರುವುದು ಹೆಮ್ಮೆಯ ಸಂಗತಿ. ಭಾರತದ ಸಂಸ್ಕೃತಿಯೇ ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣುವುದಾಗಿದೆ. ಸಂತರು, ಶರಣರು ಹಾಗೂ ಸೂಫಿ ಸಂತರು ಪರಸ್ಪರ ಪ್ರೀತಿ, ಸೌಹಾರ್ದತೆ ಮತ್ತು ಸಹಬಾಳ್ವೆಯ ಮಾರ್ಗ ತೋರಿಸಿಕೊಟ್ಟಿದ್ದಾರೆ. ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಎಲ್ಲರ ಜವಾಬ್ದಾರಿ ಎಂದರು.

ಧರ್ಮ, ಜಾತಿ ಸೇರಿದಂತೆ ಯಾವುದೇ ವಿಚಾರದಲ್ಲಿ ಭಿನ್ನಾಭಿಪ್ರಾಯ ಉಂಟಾದರೂ ಸಮಾಜದ ಶಾಂತಿಗೆ ಧಕ್ಕೆ ಬಾರದಂತೆ ಪರಸ್ಪರ ಕುಳಿತು ಪ್ರೀತಿ, ವಿಶ್ವಾಸದಿಂದ ಚರ್ಚಿಸಿ ಪರಿಹರಿಸಿಕೊಳ್ಳಬೇಕು. 'ನಾವೆಲ್ಲರೂ ಭಾರತೀಯರು' ಎಂಬ ಭಾವನೆಯೊಂದಿಗೆ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು. ಯುವಕರು ಹಿರಿಯರ ಜೀವನಾನುಭವದಿಂದ ಮಾರ್ಗದರ್ಶನ ಪಡೆದು ಮುನ್ನಡೆಯಬೇಕು ಎಂದರು.

ಪಾಲಕರು ಮಕ್ಕಳಿಗೆ ಊಟ, ಬಟ್ಟೆ ಸೇರಿದಂತೆ ಸೌಲಭ್ಯಗಳನ್ನು ಒದಗಿಸುವುದಕ್ಕಿಂತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಉತ್ತಮ ಶಿಕ್ಷಣ

> ಜನಪ್ರತಿನಿಧಿಯ ಯಶಸ್ಸನ್ನು ಕೇವಲ ರಸ್ತೆ, ಚರಂಡಿ ಹಾಗೂ ಕಟ್ಟಡಗಳ ಅಭಿವೃದ್ಧಿಯಿಂದ ಅಳೆಯಲಾಗದು. ಎಲ್ಲ ಸಮುದಾಯಗಳ ಜನರು ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಿಸುವುದೂ ಪ್ರಮುಖ ಕರ್ತವ್ಯ.
> **– ಯಾಸೀರ ಅಹ್ಮದ್ ಖಾನ್ ಪಠಾಣ, ಶಾಸಕ**

ದೊರೆತರೆ ಮಕ್ಕಳು ಜೀವನದಲ್ಲಿ ಯಾವುದೇ ಉನ್ನತ ಸ್ಥಾನ ಅಲಂಕರಿಸುವ ಸಾಮರ್ಥ್ಯ ಪಡೆಯುತ್ತಾರೆ. ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ಕುಟುಂಬ ಹಾಗೂ ಸಮಾಜದ ಜವಾಬ್ದಾರಿಯಾಗಿದೆ ಎಂದರು.

ಪಟ್ಟಣದ ಸೋಮೇಶ್ವರ ದೇವಸ್ಥಾನ ಹಾಗೂ ದೂದನಾನಾ ದರ್ಗಾಕ್ಕೆ ಭೇಟಿ ನೀಡಿ ಜನರ ಆಶೀರ್ವಾದ ಪಡೆದಿರುವುದು ಸಂತಸ ತಂದಿದೆ. ಮಂದಿರ, ಮಸೀದಿ, ಬಸದಿಗಳ ಜೀರ್ಣೋದ್ಧಾರ ಹಾಗೂ ಸರ್ಕಾರಿ ಆಸ್ಪತ್ರೆಗಳ ಅಭಿವೃದ್ಧಿಗೆ ಬಂದ ಮನವಿಗಳನ್ನು ಆದ್ಯತೆಯ ಮೇರೆಗೆ ಪರಿಗಣಿಸುವುದಾಗಿ ಖಾದರ್ ತಿಳಿಸಿದರು.

ಶಿಗ್ಗಾಂವ ಕ್ಷೇತ್ರದ ಶಾಸಕ ಯಾಸೀರಅಹ್ಮದ್ ಖಾನ್ ಪಠಾಣ ಮಾತನಾಡಿ, ಜನಪ್ರತಿನಿಧಿಯ ಯಶಸ್ಸನ್ನು ಕೇವಲ ರಸ್ತೆ, ಚರಂಡಿ ಹಾಗೂ ಕಟ್ಟಡಗಳಂತಹ ಅಭಿವೃದ್ಧಿ ಕಾಮಗಾರಿಗಳಿಂದ ಅಳೆಯಲಾಗದು. ಕ್ಷೇತ್ರದ ಜನರಲ್ಲಿ ಪರಸ್ಪರ ವಿಶ್ವಾಸ ಬೆಳೆಸಿ, ಎಲ್ಲ ಸಮುದಾಯಗಳ ಜನರು ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಿಸುವುದೂ ಜನಪ್ರತಿನಿಧಿಯ ಪ್ರಮುಖ ಕರ್ತವ್ಯ. ಮಕ್ಕಳಲ್ಲಿ ಬಾಲ್ಯದಿಂದಲೇ ಸಮಾನತೆ, ಸಹೋದರತೆ ಹಾಗೂ ಸಹಬಾಳ್ವೆಯ ಮೌಲ್ಯಗಳನ್ನು ಬೆಳೆಸಬೇಕು ಎಂದರು.

ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನ ಕಣಕೆ ಅಧ್ಯಕ್ಷತೆ ವಹಿಸಿದ್ದರು. ಕೆಪಿಸಿಸಿ ಕಾರ್ಯದರ್ಶಿ ಟಿ.ಈಶ್ವರ, ಮಾಜಿ ಶಾಸಕ ರಾಮಣ್ಣ ಲಮಾಣಿ, ಹಾವೇರಿ ಲೋಕಸಭಾ ಕ್ಷೇತ್ರದ ಮುಖಂಡ ಆನಂದಸ್ವಾಮಿ ಗಡ್ಡದೇವರಮಠ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಹುಮಾಯೂನ್ ಮಾಗಡಿ, ಗುರುನಾಥ ದಾನಪ್ಪನವರ, ಜಿ.ಆರ್.ಕೊಪ್ಪದ, ಅಂಜುಮನ್ ಸಂಸ್ಥೆ ಅಧ್ಯಕ್ಷ ಜಮೀಲ ಸೂರಣಗಿ, ಎಸ್.ಕೆ.ಹವಾಲ್ದಾರ, ಫಿರ್ದೋಶ ಆಡೂರ, ಸಿಕಂದರ ಕಣಿಕೆ, ಜಮೀಲಮ್ಮದ ಸೂರಣಗಿ, ಎಂ.ಎಂ.ಗದಗ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಂಯೋಜಿತ ಆರೋಗ್ಯ ಪ್ರಯೋಗಾಲಯ ಕಟ್ಟಡ ಉದ್ಘಾಟನೆ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಸಚಿವ ಯು.ಟಿ.ಖಾದರ್ ಅವರು ಭಾನುವಾರ ಗದಗದ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆ ಆವರಣದಲ್ಲಿ ನಿರ್ಮಿಸಲಾಗಿರುವ ಸಂಯೋಜಿತ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯದ ನೂತನ ಕಟ್ಟಡವನ್ನು ಉದ್ಘಾಟಿಸಿದರು.

ಸಾರ್ವಜನಿಕ ಆರೋಗ್ಯ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ನಿರ್ಮಿಸಲಾಗಿರುವ ಪ್ರಯೋಗಾಲಯ ಕಟ್ಟಡವನ್ನು ಸಚಿವರು ಉದ್ಘಾಟಿಸಿ, ಸಾರ್ವಜನಿಕರಿಗೆ ಆರೋಗ್ಯ ಸೇವೆ ಒದಗಿಸುವಲ್ಲಿ ಇಂತಹ ಸೌಲಭ್ಯಗಳ ಮಹತ್ವವನ್ನು ಒತ್ತಿಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಡಾ.ಎಚ್.ಕೆ.ಪಾಟೀಲ, ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್., ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ನೀಲಗುಂದ, ಡಾ.ಕರಿಗೌಡ್ರ ಸೇರಿದಂತೆ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.



## ಭೂಮಿ, ನೀರು, ತಂತ್ರಜ್ಞಾನದ ಸಮನ್ವಯದಿಂದ ಅನ್ನದಾತನ ಬದುಕಿಗೆ ಹೊಸ ಭರವಸೆ

# ಬದಲಿ ಕೃಷಿ ಕ್ರಾಂತಿಗೆ ದೃಢ ಕರ್ನಾಟಕದ ಸಂಕಲ್ಪ



'ಉಳುವ ಯೋಗಿಯ ನೋಡಲ್ಲಿ' ಎಂಬಂತೆ ರೈತ ದೇಶದ ಬೆನ್ನೆಲುಬು. ಆಹಾರ ಭದ್ರತೆ, ಗ್ರಾಮೀಣ ಉದ್ಯೋಗ ಹಾಗೂ ಆರ್ಥಿಕ ಬೆಳವಣಿಗೆಯಲ್ಲಿ ಕೃಷಿ ಕ್ಷೇತ್ರದ ಪಾತ್ರ ಮಹತ್ವದ್ದಾಗಿದೆ. ರೈತನ ಬದುಕಿಗೆ ಭೂಮಿ ಬುನಾದಿಯಾದರೆ, ನೀರು ಬೆಳೆಯ ಜೀವರಸ. ಬದಲಾಗುತ್ತಿರುವ ಹವಾಮಾನ ಮತ್ತು ಹೆಚ್ಚುತ್ತಿರುವ ಆಹಾರದ ಬೇಡಿಕೆಗೆ ತಕ್ಕಂತೆ ಕೃಷಿಗೆ ಆಧುನಿಕ ತಂತ್ರಜ್ಞಾನದ ಸ್ಪರ್ಶ ನೀಡುವುದು ಅನಿವಾರ್ಯವಾಗಿದೆ.

ರಾಜ್ಯ ಸರ್ಕಾರ 100 ದಿನಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಸೆ.10ರಂದು ನಡೆದ 'ದೃಢ ಕರ್ನಾಟಕದ ಸಂಕಲ್ಪ, ಶತಕದ ಪಥ, ಪ್ರಗತಿಯ ರಥ' ಕಾರ್ಯಕ್ರಮದಲ್ಲಿ ಕೃಷಿ ಕ್ಷೇತ್ರಕ್ಕೆ ಹಲವು ಮಹತ್ವಾಕಾಂಕ್ಷಿ ಯೋಜನೆಗಳನ್ನು ಸಮರ್ಪಿಸಲಾಗಿದೆ. ರೈತರ ಜೀವನಮಟ್ಟ ಸುಧಾರಿಸುವುದು ಹಾಗೂ ಕೃಷಿಯನ್ನು ಸುಸ್ಥಿರ ಆದಾಯದ ಉದ್ಯಮವನ್ನಾಗಿ ರೂಪಿಸುವುದು ಇದರ ಉದ್ದೇಶವಾಗಿದೆ.

ಪ್ರಸಕ್ತ ವರ್ಷ 28.63 ಲಕ್ಷ ರೈತ-ರಿಗೆ ಶೂನ್ಯ ಹಾಗೂ ಕಡಿಮೆ ಬಡ್ಡಿದರದಲ್ಲಿ ಕೃಷಿ ಸಾಲ ಒದಗಿಸಲು 25,652 ಕೋಟಿ ಅನುದಾನ ಕಾಯ್ದಿರಿಸಲಾಗಿದೆ. 121 ನೀರಾವರಿ ಯೋಜನೆಗಳಿಗೆ 17,073 ಕೋಟಿ ಮೀಸಲಿಡಲಾಗಿದೆ.

ಮುಖ್ಯಮಂತ್ರಿ ನೇಗಿಲ ಯೋಗಿ ಯೋಜನೆಯಡಿ ಮೂರು ಎಕರೆವರೆಗೆ ಜಮೀನು ಹೊಂದಿರುವ ಸಣ್ಣ ಮತ್ತು ಮಧ್ಯಮ ರೈತ-ರಿಗೆ ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆಗೆ ಪಡೆಯಲು ಶೇ.50ರಷ್ಟು ಸಹಾಯಧನ, ಗ-ರಿಷ್ಠ 4,500ವರೆಗೆ ನೀಡಲಾಗುತ್ತದೆ. ಮೊಬೈಲ್ ಮೂಲಕ ಯಂತ್ರೋಪಕರಣ ಕಾಯ್ದಿರಿಸುವ ಸೌಲಭ್ಯವೂ ಕಲ್ಪಿಸಲಾಗಿದೆ.

'ಸಿಎಂ ರೈತ ಚೈತನ್ಯ ಡಿಜಿಟಲ್ ಕೃಷಿ ಮಿಷನ್' ಮೂಲಕ ಡ್ರೋನ್ ಮತ್ತು ಉಪಗ್ರಹ ತಂತ್ರಜ್ಞಾನ ಬಳಸಿ ಬೆಳೆ ಸಮೀಕ್ಷೆ ನಡೆಸಿ ಕೀಟಬಾಧೆ ಹಾಗೂ ಬೆಳೆ ಬೆಳವಣಿಗೆಯ ನಿಖರ ಮಾಹಿತಿ ರೈತರಿಗೆ ನೀಡಲಾಗುತ್ತದೆ. ಮಾರುಕಟ್ಟೆ ದರಗಳ ನೇರ ಮಾಹಿತಿಯಿಂದ ಸೂಕ್ತ ಸಮಯದಲ್ಲಿ ಬೆಳೆ ಮಾರಾಟಕ್ಕೆ ಅನುಕೂಲವಾಗಲಿದೆ.

ಮಳೆಯಾಶ್ರಿತ ಕೃಷಿಯಲ್ಲಿ ಜಲಸಂರಕ್ಷಣೆ, ಮಣ್ಣಿನ ಗುಣಮಟ್ಟ ಸುಧಾರಣೆ ಹಾಗೂ ಹವಾಮಾನ ಸ್ನೇಹಿ ಕೃಷಿಗೆ ಒತ್ತು ನೀಡಲಾಗುತ್ತಿದೆ. ಪಶುಸಂಗೋಪನೆ ಮತ್ತು ವೃಕ್ಷಾಧಾರಿತ ಕೃಷಿಯ ಮೂಲಕ ರೈತರಿಗೆ ಪೂರಕ ಆದಾಯ ಕಲ್ಪಿಸುವ ಉದ್ದೇಶವಿದೆ.

ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ರಫ್ತಿಗೆ ಕೆಪೆಕ್ ಸಂಸ್ಥೆಯನ್ನು ಬಲಪಡಿಸಲಾಗುತ್ತಿದ್ದು, ಮಾವು, ದಾಳಿಂಬೆ, ರಾಗಿ, ಸಿರಿಧಾನ್ಯ, ಅಕ್ಕಿ ಹಾಗೂ ತೊಗರಿಗೆ ಗ್ರೇಡಿಂಗ್ ಮತ್ತು ಬ್ರಾಂಡಿಂಗ್ ಸೌಲಭ್ಯ ಕಲ್ಪಿಸಲಾಗುತ್ತಿದೆ.


ಪಿಎಂ ಕುಸುಮ್ ಯೋಜನೆಯಡಿ 1,80,003ಕ್ಕೂ ಹೆಚ್ಚು ರೈತರ ಪಂಪ್‌ಸೆಟ್‌ಗಳನ್ನು ಸೌರ ವಿದ್ಯುದೀಕರಣಗೊಳಿಸಿರುವ ಕರ್ನಾಟಕ ದಕ್ಷಿಣ ಭಾರತದಲ್ಲಿ ಮೊದಲ ಸ್ಥಾನದಲ್ಲಿದೆ. 'ತೇಗದ ಸಿರಿ' ಯೋಜನೆಯ ಮೂಲಕ ಬೆಲೆಬಾಳುವ ಮರಗಳ ಬೆಳೆಸುವಿಕೆಗೆ ಉತ್ತೇಜನ ನೀಡಲಾಗುತ್ತಿದೆ.

ಭೂಮಿ, ನೀರು, ತಂತ್ರಜ್ಞಾನ ಹಾಗೂ ಮಾರುಕಟ್ಟೆ ಸಂಪರ್ಕವನ್ನು ಸಮನ್ವಯಗೊಳಿಸಿ ರೈತನ ಶ್ರಮಕ್ಕೆ ತಕ್ಕ ಮೌಲ್ಯ ದೊರಕಿಸುವುದು ಸರ್ಕಾರದ ಆಶಯವಾಗಿದೆ. ಈ ಮೂಲಕ ಕೃಷಿ ಕ್ಷೇತ್ರವನ್ನು 'ಅವಕಾಶಗಳ ಹೆದ್ದಾರಿ'ಯಾಗಿ ರೂಪಿಸುವ ಪ್ರಯತ್ನ ನಡೆದಿದೆ.

–ವೈ ಸಿ ಸಂಪತ್‌ಕುಮಾರ್, ಮುಖ್ಯ ವರದಿಗಾರರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು

## ಆಯುರ್ವೇದದ ದೃಷ್ಟಿಯಲ್ಲಿ ಆರೋಗ್ಯಕರ ಆಹಾರದ ಸರಳ ಸೂತ್ರಗಳು

# ಆಹಾರದ ಪ್ರಮಾಣಕ್ಕಿಂತ ಜೀರ್ಣಶಕ್ತಿಯ ಅರಿವು ಮುಖ್ಯ




ಆಹಾರವೆಂದರೆ ಕೇವಲ ಹಸಿವು ನೀಗಿಸುವ ಸಾಧನವಲ್ಲ, ದೇಹದ ಆರೋಗ್ಯ, ಶಕ್ತಿ, ಜೀರ್ಣಕ್ರಿಯೆ ಹಾಗೂ ದೈನಂದಿನ ಜೀವನಶೈಲಿಯ ಮೇಲೆ ನೇರ ಪರಿಣಾಮ ಬೀರುವ ಪ್ರಮುಖ ಅಂಶ. ಇಂದಿನ ವೇಗದ ಜೀವನದಲ್ಲಿ ಆಹಾರದ ಗುಣಮಟ್ಟದ ಬಗ್ಗೆ ಹೆಚ್ಚು ಚರ್ಚೆಯಾಗುತ್ತಿದ್ದರೂ, ಎಷ್ಟು ಪ್ರಮಾಣದಲ್ಲಿ, ಯಾವ ಸಮಯದಲ್ಲಿ ಹಾಗೂ ಯಾವ ರೀತಿಯಲ್ಲಿ ಸೇವಿಸಬೇಕು ಎಂಬುದರ ಕಡೆಗೆ ಗಮನ ಕಡಿಮೆ.

ಆಯುರ್ವೇದವು ಆಹಾರವನ್ನು ಆರೋಗ್ಯದ ಪ್ರಮುಖ ಆಧಾರವೆಂದು ಪರಿಗಣಿಸುತ್ತದೆ. 'ಸರಿಯಾದ ಆಹಾರವೇ ಔಷಧಿ' ಎಂಬ ಮಾತು ಅರ್ಥಪೂರ್ಣವಾಗಬೇಕಾದರೆ, ಆಹಾರವು ವ್ಯಕ್ತಿಯ ದೇಹಪ್ರಕೃತಿ, ಜೀರ್ಣಶಕ್ತಿ, ವಯಸ್ಸು, ಋತು, ದೈಹಿಕ ಚಟುವಟಿಕೆ ಹಾಗೂ ಆರೋಗ್ಯಸ್ಥಿತಿಗೆ ಅನುಗುಣವಾಗಿರಬೇಕು.

'ಎಷ್ಟು ತಿನ್ನಬೇಕು?' ಎಂಬ ಪ್ರಶ್ನೆಗೆ ಎಲ್ಲರಿಗೂ ಒಂದೇ ಉತ್ತರ ಸಾಧ್ಯವಿಲ್ಲ. ಆಯುರ್ವೇದದಲ್ಲಿ ಆಹಾರದ ಪ್ರಮಾಣವನ್ನು 'ಆಹಾರಮಾತ್ರೆ' ಎಂದು ಕರೆಯಲಾಗುತ್ತದೆ. ವ್ಯಕ್ತಿಯ ಜೀರ್ಣಶಕ್ತಿಗೆ ಅನುಗುಣವಾಗಿ ಇದು ಬದಲಾಗುತ್ತದೆ. ಉತ್ತಮ ಜೀರ್ಣಶಕ್ತಿ ಇರುವವರಿಗೆ ಸರಿಹೊಂದುವ ಪ್ರಮಾಣವು ಮತ್ತೊಬ್ಬರಿಗೆ ಹೊಟ್ಟೆಭಾರ, ಅಜೀರ್ಣ, ಉಬ್ಬರ ಅಥವಾ ಆಮ್ಲತೆಯನ್ನು ಉಂಟುಮಾಡಬಹುದು. ಹೀಗಾಗಿ ಅಗತ್ಯಕ್ಕಿಂತ ಹೆಚ್ಚಾಗಿ ತಿನ್ನುವುದಕ್ಕಿಂತ ದೇಹಕ್ಕೆ ಸುಲಭವಾಗಿ ಜೀರ್ಣವಾಗುವಷ್ಟು ಆಹಾರ ಸೇವಿಸುವುದು ಮುಖ್ಯ.

ಚರಕ ಸಂಹಿತೆಯ 'ತ್ರಿವಿಧ ಕುಕ್ಷಿ' ಪರಿಕಲ್ಪನೆಯಲ್ಲಿಯೂ ಆಹಾರ, ದ್ರವ ಹಾಗೂ ಜೀರ್ಣಕ್ರಿಯೆಗೆ ಅಗತ್ಯವಾದ ಖಾಲಿ ಸ್ಥಳಕ್ಕೆ ಅವಕಾಶ ನೀಡುವ ವಿಚಾರವಿದೆ. ಊಟದ ಬಳಿಕ ಅತಿಯಾದ ಭಾರ, ನಿದ್ರೆ, ಆಲಸ್ಯ ಅಥವಾ ಹೊಟ್ಟೆ ಉಬ್ಬರ ಕಂಡುಬಂದರೆ ಆಹಾರದ ಪ್ರಮಾಣ ಮತ್ತು ಸ್ವಭಾವವನ್ನು ಪರಿಶೀಲಿಸಬೇಕು.

ವಾತ, ಪಿತ್ತ ಹಾಗೂ ಕಫ ಪ್ರಕೃತಿಗಳಲ್ಲಿನ ವ್ಯತ್ಯಾಸದಂತೆ ಆಹಾರ ಪದ್ಧತಿಯೂ ಬದಲಾಗುತ್ತದೆ. ವಾತ ಪ್ರಕೃತಿಯವರಿಗೆ ಬಿಸಿ, ತಾಜಾ ಹಾಗೂ ಸ್ವಲ್ಪ ಸ್ನಿಗ್ಧ ಆಹಾರ; ಪಿತ್ತ ಪ್ರಕೃತಿಯವರಿಗೆ ಅತಿಯಾದ ಖಾರ, ಹುಳಿ, ಉಪ್ಪು ಮತ್ತು ಉಷ್ಣ ಆಹಾರವನ್ನು ಮಿತಗೊಳಿಸುವುದು, ಕಫ ಪ್ರಕೃತಿಯವರಿಗೆ ಹಗುರವಾದ, ಬಿಸಿ ಹಾಗೂ ಮಿತ ಪ್ರಮಾಣದ ಆಹಾರ ಅನುಕೂಲಕರವಾಗಬಹುದು. ಆದ-ರಿಂದ ಒಬ್ಬರಿಗೆ ಹೊಂದುವ ಆಹಾರ ಎಲ್ಲ-ರಿಗೂ ಸೂಕ್ತವಾಗುತ್ತದೆ ಎನ್ನಲಾಗದು.

ಆಹಾರದ ಗುಣಕ್ಕೂ ಮಹತ್ವವಿದೆ. ಕೆಲವು ಆಹಾರಗಳು ಸುಲಭವಾಗಿ ಜೀರ್ಣವಾದರೆ, ಇನ್ನೂ ಕೆಲವು ಹೆಚ್ಚು ಸಮಯ ತೆಗೆದುಕೊಳ್ಳುತ್ತವೆ. ಹೀಗಾಗಿ ಆಹಾರದ ಸ್ವಭಾವಕ್ಕೆ ತಕ್ಕಂತೆ ಪ್ರಮಾಣವನ್ನು ಹೊಂದಿಸಿಕೊಳ್ಳುವುದು ಅಗತ್ಯ.

ಸಹಜ ಹಸಿವು ಉಂಟಾದಾಗ ಊಟ ಮಾಡುವುದು, ಸಾಧ್ಯವಾದಷ್ಟು ನಿಯಮಿತ ಸಮಯ ಪಾಲಿಸುವುದು ಹಾಗೂ ರಾತ್ರಿ ತಡವಾಗಿ ಹೆಚ್ಚಿನ ಪ್ರಮಾಣದಲ್ಲಿ ಆಹಾರ ಸೇವಿಸಿ ತಕ್ಷಣ ಮಲಗುವುದನ್ನು ತಪ್ಪಿಸುವುದು ಉತ್ತಮ. ಋತುವಿಗೆ ಅನುಗುಣವಾದ ತಾಜಾ ಮತ್ತು ಸ್ಥಳೀಯ ಆಹಾರಕ್ಕೆ ಆದ್ಯತೆ ನೀಡಬೇಕು.

ಆತುರದಲ್ಲಿ ಅಥವಾ ಮೊಬೈಲ್ ನೋಡುತ್ತಾ ಊಟ ಮಾಡುವ ಬದಲು ಶಾಂತವಾಗಿ ಕುಳಿತು, ಆಹಾರವನ್ನು ಚೆನ್ನಾಗಿ ಅಗಿದು ನಿಧಾನವಾಗಿ ಸೇವಿಸುವುದು ಆರೋಗ್ಯಕರ ಅಭ್ಯಾಸ. ಹಸಿವು ಮತ್ತು ತೃಪ್ತಿಯ ಸಂಕೇತಗಳನ್ನು ಗಮನಿಸುವುದರಿಂದ ಅತಿಯಾದ ಸೇವನೆಯನ್ನು ತಪ್ಪಿಸಬಹುದು.

ಆರೋಗ್ಯಕ್ಕಾಗಿ ಆಹಾರವನ್ನು ಸಂಪೂರ್ಣವಾಗಿ ಕಡಿಮೆ ಮಾಡುವ ಅಗತ್ಯವಿಲ್ಲ; ರುಚಿಕರ ಆಹಾರವನ್ನೂ ತ್ಯಜಿಸಬೇಕಿಲ್ಲ. 'ಬೇಕಾದ ಆಹಾರ, ಬೇಕಾದ ಪ್ರಮಾಣದಲ್ಲಿ, ಬೇಕಾದ ಸಮಯದಲ್ಲಿ, ದೇಹಕ್ಕೆ ಹೊಂದುವ ರೀತಿಯಲ್ಲಿ' ಸೇವಿಸುವುದೇ ಆರೋಗ್ಯಕರ ಆಹಾರ ಪದ್ಧತಿಯ ಮೂಲತತ್ವ.

ವೈಯಕ್ತಿಕ ಪ್ರಕೃತಿ, ಜೀರ್ಣಶಕ್ತಿ ಹಾಗೂ ಆರೋಗ್ಯಸ್ಥಿತಿಗೆ ಅನುಗುಣವಾದ ಆಹಾರ ಮಾರ್ಗದರ್ಶನಕ್ಕಾಗಿ ಅರ್ಹ ಆಯುರ್ವೇದ ವೈದ್ಯರ ಸಲಹೆ ಪಡೆಯುವುದು ಸೂಕ್ತ.

– ಡಾ. ಪೂಜಾ ಮುರಳ್, ಎಂ.ಡಿ.,
ಆಯುರ್ವೇದ ವೈದ್ಯರು

## ಪರಿಸರ ಸ್ನೇಹಿಯಾಗಿ ಆಚರಿಸೋಣ ಗೌರಿ-ಗಣೇಶ ಹಬ್ಬ



ಗೌರಿ-ಗಣೇಶ ಹಬ್ಬದ ಸಡಗರ-ಸಂಭ್ರಮ ಎಲ್ಲೆಡೆ ಮನೆ ಮಾಡಿದೆ. ನಗರ ಪ್ರದೇಶಗಳಿಂದ ಹಿಡಿದು ರಾಜ್ಯದ ಹಳ್ಳಿ-ಹಳ್ಳಿಗಳಲ್ಲಿ, ಮನೆಗಳ ಅಂಗಳದಿಂದ ಬೀದಿ ಬಡಾವಣೆಗಳವರೆಗೆ ಗಣೇಶೋತ್ಸವವನ್ನು ವೈಭವದಿಂದ ಆಚರಿಸಲಾಗುತ್ತದೆ. ದೇಶದಾದ್ಯಂತ ಜಾತಿ-ಮತ ಭೇದವಿಲ್ಲದೆ ಆಚರಿಸುವ ಪ್ರಮುಖ ಹಬ್ಬಗಳಲ್ಲಿ ಗಣೇಶ ಚತುರ್ಥಿಗೆ ತನ್ನದೇ ಆದ ವೈಶಿಷ್ಟ್ಯವಿದೆ.

ಭಾದ್ರಪದ ಮಾಸದ ಶುಕ್ಲ ಪಕ್ಷದ ಚತುರ್ಥಿಯಂದು ಆಚರಿಸುವ ಗಣೇಶ ಚತುರ್ಥಿಯನ್ನು ವಿನಾಯಕನ ಜನ್ಮದಿನವೆಂದು ಭಾವಿಸಲಾಗುತ್ತದೆ. ಮಹಾರಾಷ್ಟ್ರ, ಗೋವಾ, ತಮಿಳುನಾಡು ಹಾಗೂ ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ಗಣೇಶೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಮನೆಗಳ ಅಂಗಳದಲ್ಲಿ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಒಂದು, ಮೂರು, ಐದು, ಏಳು, ಹನ್ನೊಂದು ಅಥವಾ ಇಪ್ಪತ್ತೊಂದು ದಿನಗಳವರೆಗೆ ಪೂಜಿಸಿ, ಆರಾಧಿಸುವ ಸಂಪ್ರದಾಯವಿದೆ. ಕೆಲವರು ಒಂದೇ ದಿನ ಗಣೇಶನನ್ನು ಪೂಜಿಸುತ್ತಾರೆ.

ಗಣೇಶನ ಪೂಜೆಯ ಮೊದಲ ದಿನ ಗೌರಿಪೂಜೆಯನ್ನು ನೆರವೇರಿಸುವುದು ವಿಶೇಷ. ಯಾವುದೇ ಶುಭ ಸಮಾರಂಭ ಅಥವಾ ಕಾರ್ಯವನ್ನು ಆರಂಭಿಸುವ ಮುನ್ನ ಗಣೇಶನ ಪೂಜೆ ಮಾಡುವ ಸಂಪ್ರದಾಯವೂ ಇದೆ. ವಿಘ್ನಗಳನ್ನು ನಿವಾರಿಸಿ, ಕೈಗೊಂಡ ಕಾರ್ಯಗಳು ಯಾವುದೇ ಅಡೆತಡೆಯಿಲ್ಲದೆ ಯಶಸ್ವಿಯಾಗಿ ಪೂರ್ಣಗೊಳ್ಳಲಿ ಎಂಬ ಆಶಯದಿಂದ ವಿನಾಯಕನನ್ನು ಪೂಜಿಸಲಾಗುತ್ತದೆ.

ಏಕದಂತ, ಮಂಗಳಮೂರ್ತಿ, ವಿಘ್ನೇಶ್ವರ, ಲಂಬೋದರ, ವಿನಾಯಕ, ಗಜಮುಖ, ಮೂಷಿಕವಾಹನ, ಮೋದಕಪ್ರಿಯ, ಪಿಳ್ಳೈಯಾರ್ ಸೇರಿದಂತೆ ಗಣೇಶನಿಗೆ ಅನೇಕ ಹೆಸರುಗಳಿವೆ. ಭಕ್ತರ ಕಾರ್ಯಗಳಿಗೆ ಎದುರಾಗುವ ವಿಘ್ನಗಳನ್ನು ನಿವಾರಿಸುವುದರಿಂದ ಆತನನ್ನು 'ವಿಘ್ನೇಶ್ವರ' ಎಂದು ಕರೆಯಲಾಗುತ್ತದೆ.

ಗಣೇಶೋತ್ಸವದ ಸಂಭ್ರಮದ ಜತೆಗೆ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನೂ ಪ್ರತಿಯೊಬ್ಬರೂ ಮರೆಯಬಾರದು. ಗಣೇಶ ಮೂರ್ತಿಯ ವಿಸರ್ಜನೆಗೂ ಮುನ್ನ ಹೂವು, ವಸ್ತ್ರ ಹಾಗೂ ಇತರ ಪೂಜಾ ಸಾಮಗ್ರಿಗಳು, ಅಲಂಕಾರಿಕ ವಸ್ತುಗಳು, ಕಾಗದ, ಪ್ಲಾಸ್ಟಿಕ್‌ನಿಂದ ತಯಾರಿಸಿದ ವಸ್ತುಗಳನ್ನು ಪ್ರತ್ಯೇಕವಾಗಿ ತೆಗೆಯಬೇಕು.

ಕೆರೆ, ನದಿ ಅಥವಾ ಸಮುದ್ರದಲ್ಲಿ ವಿಸರ್ಜಿಸುವ ಗಣೇಶ ಮೂರ್ತಿಗಳು ಪರಿಸರಕ್ಕೆ ಹಾನಿಯಾಗದಂತೆ ಮಣ್ಣಿನಿಂದ ತಯಾರಿಸಿದವುಗಳಾಗಿರಬೇಕು. ಪ್ಲಾಸ್ಟಿಕ್ ವಸ್ತುಗಳು, ಮರ ಹಾಗೂ ಬಿದಿರಿನ ಕಡ್ಡಿಗಳು ಸೇರಿದಂತೆ ವಿಸರ್ಜನೆಗೆ ಯೋಗ್ಯವಲ್ಲದ ವಸ್ತುಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಬೇಕು. ನಮ್ಮ ಸುತ್ತಮುತ್ತಲಿನ ಪರಿಸರವನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

ಆದ್ದರಿಂದ ಈ ಬಾರಿಯ ಗೌರಿ-ಗಣೇಶ ಹಬ್ಬವನ್ನು ಭಕ್ತಿ, ಸಂಭ್ರಮದ ಜತೆಗೆ ಪರಿಸರ ಕಾಳಜಿಯೊಂದಿಗೆ ಆಚರಿಸೋಣ. ಮಣ್ಣಿನಿಂದ ತಯಾರಿಸಿದ ಪರಿಸರ ಸ್ನೇಹಿ ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಹಬ್ಬದ ಪಾವಿತ್ರ್ಯವನ್ನು ಉಳಿಸುವುದರೊಂದಿಗೆ ಪ್ರಕೃತಿಯನ್ನೂ ಸಂರಕ್ಷಿಸೋಣ.

– ಟಿ.ಎಂ.ಎಸ್. ಗೋಪಿ,
ಲೇಖಕರು, ಸಾಹಿತಿಗಳು
ಬೆಂಗಳೂರು

## ಅಹಿತಕರ ಘಟನೆ ನಡೆದರೆ ಆಯೋಜಕರೇ ಹೊಣೆ: ಎಸ್‌ಪಿ ಜಾಹ್ನವಿ

# ಗಣೇಶೋತ್ಸವದಲ್ಲಿ ಡಿಜೆ ಕಡ್ಡಾಯ ನಿಷೇಧ




ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಗಣೇಶ ಚತುರ್ಥಿ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಸೇರುವುದ-ರಿಂದ ಸಮಾಜದಲ್ಲಿ ಶಾಂತಿ ಭಂಗವಾಗುವ ಸಾಧ್ಯತೆಗಳಿದ್ದು, ಯಾವುದೇ ಅಹಿತಕರ ಘಟನೆ ನಡೆದರೆ ಆಯೋಜಕರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ವಿಜಯನಗರ ಜಿಲ್ಲಾ ಪೊಲೀಸ್ ಅಧೀಕ್ಷಕಿ ಜಾಹ್ನವಿ ಎಚ್ಚರಿಕೆ ನೀಡಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಆಯೋಜಿಸಿದ್ದ ಗಣೇಶೋತ್ಸವದ ಶಾಂತಿಸಭೆಯಲ್ಲಿ ಮಾತನಾಡಿದ ಅವರು, ಗಣೇಶ ಹಬ್ಬದ ಸಂದರ್ಭದಲ್ಲಿ ಜಿಲ್ಲಾದ್ಯಂತ ಯಾವುದೇ ರೀತಿಯ ಡಿಜೆ ಬಳಕೆಗೆ ಅವಕಾಶವಿರುವುದಿಲ್ಲ. ಹೀಗಾಗಿ ಸಾರ್ವಜನಿಕರು ಹಾಗೂ ಗಣೇಶೋತ್ಸವ ಆಯೋಜಕರು ಅತ್ಯಂತ ಜವಾಬ್ದಾ-ರಿಯಿಂದ ಹಬ್ಬವನ್ನು ಆಚರಿಸಬೇಕು ಎಂದು ಸೂಚಿಸಿದರು.

ಗಣೇಶೋತ್ಸವ ಆಯೋಜಕರು ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳಬೇಕು. ಯಾವುದೇ ಅಹಿತಕರ ಘಟನೆಗಳು ಸಂಭವಿಸಿದಲ್ಲಿ ಪರಿಸ್ಥಿತಿ ನಿಯಂತ್ರಿಸಲು ಪೊಲೀಸ್ ಇಲಾಖೆ ಸನ್ನದ್ಧವಾಗಿರುತ್ತದೆ. ಸಾರ್ವಜನಿಕರ ತುರ್ತು ಸೇವೆಗಾಗಿ 112 ಸಹ ಸದಾ ಸಿದ್ಧವಿರುತ್ತದೆ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಮುಖಂಡ ಮುಟುಗನಹಳ್ಳಿ ಕೊಟ್ರೇಶ ಮಾತನಾಡಿ, ನಾಗರಿಕರು ಹಾಗೂ ಯುವಕರು ಸಡಗರ-ಸಂಭ್ರಮದಿಂದ ಗಣೇಶ ಹಬ್ಬ ಆಚರಿಸಬೇಕು ಎಂದು ಮನವಿ ಮಾಡಿದರು.

ಪತ್ರಕರ್ತ ಹುಳ್ಳಿ ಪ್ರಕಾಶ್ ಮಾತನಾಡಿ, ಗಣೇಶೋತ್ಸವ ಸಂದರ್ಭದಲ್ಲಿ ನಾಟಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಹೆಚ್ಚಿನ ಸಮಯಾವಕಾಶ ನೀಡುವಂತೆ ಪೊಲೀಸ್ ಇಲಾಖೆಗೆ ಮನವಿ ಮಾಡಿದರು.

'ದಿ ಹಂಪಿ ವರ್ಲ್ಡ್' ದಿನಪತ್ರಿಕೆ ಸಂಪಾದಕ ಎಂ. ಶಿವಮೂರ್ತಿ ಮಾತನಾಡಿ, ಭಾರತ ಹಲವು ಧರ್ಮ, ಜಾತಿ, ಆಚ-ರ-ವಿಚಾರಗಳನ್ನು ಹೊಂದಿರುವ ರಾಷ್ಟ್ರವಾಗಿದ್ದು, 'ವಿವಿಧತೆಯಲ್ಲಿ ಏಕತೆ'ಯನ್ನು ಬಿಂಬಿಸುವ ದೇಶವಾಗಿದೆ. ಸಿದ್ಧಿವಿನಾಯಕನ ಹಬ್ಬವನ್ನು ಭಕ್ತಿ ಮತ್ತು ಸೌಹಾರ್ದತೆಯಿಂದ ಆಚರಿಸಬೇಕು ಎಂದು ಹೇಳಿದರು.

ಟಿವಿ ವಾಹಿನಿಯ ಸತೀಶ್ ಪಾಟೀಲ ಮಾತನಾಡಿ, ಹಬ್ಬದ ಸಂದರ್ಭದಲ್ಲಿ ಅಬಕಾರಿ ಇಲಾಖೆ ಹಾಡುಹಗಲೇ ನಡೆಯುವ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು. ಪುರಸಭೆ ಹಾಗೂ ಆರೋಗ್ಯ ಇಲಾಖೆ ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಪುರಸಭೆ ಸದಸ್ಯ ಪವಾಡಿ ಹನುಮಂತಪ್ಪ, ಕಾಂಗ್ರೆಸ್ ಮುಖಂಡರಾದ ಸಿಖಂದರ್ ಖಾನ್, ಪುರಸಭೆ ಮಾಜಿ ಅಧ್ಯಕ್ಷ ಎಂ. ಮರಿರಾಮಪ್ಪ, ಸೆರೆಗಾರ ಹುಚ್ಚಪ್ಪ, ವಕೀಲರ ಸಂಘದ ಅಧ್ಯಕ್ಷ ಕೊಟ್ರೇಶ್ ಶೆಟ್ಟರ್, ಸಮಾಜ ಸೇವಕ ಗದ್ದಿಕೇರಿ ನಾಗಭೂಷಣ ಸ್ವಾಮಿ, ಸರ್ದಾರ್ ಯಮನೂರಪ್ಪ ಸೇ-ರಿದಂತೆ ಹಲವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ಮಲ್ಲೇಶನಾಯ್ಕ ದೊಡ್ಮನಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ, ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಹೇಮರೆಡ್ಡಿ, ಅಬಕಾರಿ ಇಲಾಖೆಯ ಮಮತಾ, ಕೂಡ್ಲಿಗಿ ಹಾಗೂ ತಂಬ್ರಹಳ್ಳಿ ಭಾಗದ ಪೊಲೀಸ್ ಅಧಿಕಾರಿಗಳು, ಆರೋಗ್ಯ ಇಲಾಖೆ ಮತ್ತು ಪುರಸಭೆ ಅಧಿಕಾರಿಗಳು, ಡೆಪ್ಯೂಟಿ ತಹಶೀಲ್ದಾರ್ ಶಿವಕುಮಾರಗೌಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾ-ರಿಗಳು ಉಪಸ್ಥಿತರಿದ್ದರು.

ಸಿಪಿಐ ವಿಕಾಸ್ ಲಮಾಣಿ ಕಾರ್ಯಕ್ರಮ ನಿರ್ವಹಿಸಿದರು. ತಾಲೂಕಿನ ವಿವಿಧ ಭಾಗಗಳಿಂದ 500ಕ್ಕೂ ಅಧಿಕ ಜನರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಶಾಂತಿಸಭೆಯಲ್ಲಿ ಪಾಲ್ಗೊಂಡಿದ್ದರು.

# ಗುಣಮಟ್ಟ ಕಾಯ್ದುಕೊಂಡು ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ



ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಪಿಎಂಸಿ ಯಾರ್ಡ್ ರಸ್ತೆಯಲ್ಲಿ ರೈತ ಸಂಪರ್ಕ ಕೇಂದ್ರ ಕಟ್ಟಡ ಹಾಗೂ ಗೋದಾಮು ನಿರ್ಮಾಣ ಕಾಮಗಾರಿಗೆ ಮಾಜಿ ಸಚಿವ ಎಚ್.ಕೆ. ಪಾಟೀಲ ಅವರು ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಕೃಷಿ ಇಲಾಖೆಯ 2025-26ನೇ ಸಾಲಿನ RIDF ಟ್ರ್ಯಾಂಡ್-31ರ ಸಬ್ಸಿಡಿ ಯೋಜನೆಯಡಿ ಅಂದಾಜು 2 ಕೋಟಿ ವೆಚ್ಚದಲ್ಲಿ ಈ ಕಟ್ಟಡ ನಿರ್ಮಾಣವಾಗಲಿದೆ. ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಯಾವುದೇ ರಾಜಿ ಮಾಡಿಕೊಳ್ಳದೆ, ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಎಚ್.ಕೆ. ಪಾಟೀಲ ಅವರು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಖಡಕ್ ಸೂಚನೆ ನೀಡಿದರು.

ರೈತ ಸಂಪರ್ಕ ಕೇಂದ್ರದ ಮೂಲಕ ರೈತರಿಗೆ ಅಗತ್ಯವಿರುವ ಕೃಷಿ ಮಾಹಿತಿಯ ಜತೆಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಲಭ್ಯವಾಗಲಿದೆ. ಅಲ್ಲದೆ, ರೈತರು ಬೆಳೆದ ಧಾನ್ಯಗಳನ್ನು ಸುರಕ್ಷಿತವಾಗಿ ಸಂಗ್ರಹಿಸಲು ಗೋದಾಮಿನ ಸೌಲಭ್ಯವೂ ದೊರೆಯಲಿದೆ. ಈ ಯೋಜನೆಯಿಂದ ಗದಗ ಭಾಗದ ಕೃಷಿ ವಲಯದ ಪ್ರಗತಿಗೆ ಹೆಚ್ಚಿನ ಉತ್ತೇಜನ ದೊರೆಯಲಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಚೇತನಾ ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ಅಸುಟಿ, ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೋರವಣ್ಣವರ, ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, ಪರಮೇಶ್ವರಪ್ಪ ಜಂತ್ಲಿ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜಿನಗ, ಗದಗ-ಬೆಟಗೇರಿ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಬಸವರಾಜೇಶ್ವರಿ, ಸಜ್ಜನ, ಸಂಜೀವರೆಡ್ಡಿ, ಶಿವು ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು.

## ಸಣ್ಣ ಸುದ್ದಿಗಳು

# ಯೋಗಾಚಾರ್ಯರಿಗೆ ರಾಜ್ಯ ಪ್ರಶಸ್ತಿ ಪ್ರದಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರಿನ ವಿವೇಕಾನಂದ ಯೋಗ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ಹಾಗೂ ಯೋಗ ಸ್ಪೋರ್ಟ್ಸ್ ಫೌಂಡೇಶನ್ ಸಹಯೋಗದಲ್ಲಿ ಶಿಕ್ಷಕರ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ ತಿಂಗಳಾದ್ಯಂತ ಹಮ್ಮಿಕೊಂಡಿರುವ 'ಗುರುವಂದನಾ ಸಂಭ್ರಮಾಚರಣೆ' ಕಾರ್ಯಕ್ರಮದ ಅಂಗವಾಗಿ ಯೋಗ ಸೇವಾ ಶಿಕ್ಷಕರನ್ನು ಗುರುತಿಸಿ ರಾಜ್ಯ ಗೌರವ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸೆ.11ರಂದು ಮೈಸೂರಿನ ಪತ್ರಿಕಾ ಭವನದಲ್ಲಿ ಯೋಗ ಸಾಧನೆ, ಬೋಧನೆ, ತರಬೇತಿ, ಪ್ರಸಾರ ಹಾಗೂ ಸೇವೆಯಲ್ಲಿ ತೊಡಗಿರುವ 14 ಯೋಗಾಚಾರ್ಯರಿಗೆ 'ರಾಜಯೋಗಿ ಟಿ. ಕೃಷ್ಣಮಾಚಾರ್ಯ ಪ್ರಶಸ್ತಿ–2026' ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಶ್ರೀ ನಾರಾಯಣ ವಿಶ್ವ ಯೋಗಾಶ್ರಮದ ಶ್ರೀ ಶ್ರೀ ನಿತ್ಯಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಮೈಸೂರು ಜಿಲ್ಲಾ ಆಯುಷ್ ಅಧಿಕಾರಿ ಡಾ. ರೇಣುಕಾದೇವಿ ಸಮ್ಮುಖ ವಹಿಸಿದ್ದರು. ಮೈಸೂರು ವಿವೇಕಾನಂದ ಯೋಗ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಯ ಸಂಚಾಲಕ ಡಾ. ಪಿ.ಎನ್. ಗಣೇಶಕುಮಾರ್, ನಿವೃತ್ತ ವಾಣಿಜ್ಯ ತೆರಿಗೆ ಅಧಿಕಾರಿ ಮೋಹನ್, ಯೋಗ ಸ್ಪೋರ್ಟ್ಸ್ ಫೌಂಡೇಶನ್ ಖಜಾಂಚಿ ವಿವೇಕ್ ಹಾಗೂ ನಿರ್ದೇಶಕ ನಿಶಾಂತ್ ಉಪಸ್ಥಿತರಿದ್ದರು. ಡಾ. ಪಿ.ಎನ್. ಗಣೇಶಕುಮಾರ್ ಮಾತನಾಡಿ, ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಾಲದಲ್ಲಿ ಯೋಗದ ಅಭಿವೃದ್ಧಿ ಹಾಗೂ ಪ್ರಸಾರಕ್ಕೆ ಮಹತ್ತರ ಕೊಡುಗೆ ನೀಡಿದ ಯೋಗಾಚಾರ್ಯ ಟಿ. ಕೃಷ್ಣಮಾಚಾರ್ಯ ಅವರ ಹೆಸರಿನಲ್ಲಿ ರಾಜ್ಯ ಪ್ರಶಸ್ತಿ ಸ್ಥಾಪಿಸಲಾಗಿದೆ. ಗುರು ಪರಂಪರೆಯನ್ನು ಸ್ಥಿರವಾಗಿ ಮುಂದುವರಿಸುವುದು ಪ್ರಶಸ್ತಿಯ ಉದ್ದೇಶವಾಗಿದೆ ಎಂದರು.

ಪ್ರಶಸ್ತಿ ಪುರಸ್ಕೃತರ ಪರವಾಗಿ ಕೃಷ್ಣಪ್ಪ, ರಮೇಶಕುಮಾರ್ ಹಾಗೂ ಕೆ.ಎಸ್. ಪಲ್ಲೇದ ಮಾತನಾಡಿ, ಯೋಗವನ್ನು ಜೆನ್ ಅಲ್ಫಾ ಹಾಗೂ ಜೆನ್ ಝೀ ಸಮುದಾಯದ ಯುವಜನರಿಗೆ ತಲುಪಿಸಬೇಕು. ಶಾಲಾ–ಕಾಲೇಜುಗಳ ಪರೀಕ್ಷೆ ಹಾಗೂ ಪ್ರಮಾಣಪತ್ರಗಳಲ್ಲಿ ಯೋಗಕ್ಕೆ ಅಂಕಗಳನ್ನು ಕಡ್ಡಾಯಗೊಳಿಸಬೇಕು. ಯೋಗಾಸನ ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ರಾಜಯೋಗಿ ಟಿ. ಕೃಷ್ಣಮಾಚಾರ್ಯ ಪ್ರಶಸ್ತಿ ಪುರಸ್ಕೃತರು ಹಾಗೂ ಸಂಘಟಕರಿಗೆ ಗದುಗಿನ ಎಸ್.ವೈ.ಬಿ.ಎಂ.ಎಸ್. ಯೋಗ ಪಾಠಶಾಲೆ, ಬಸವ ಯೋಗ ಮಹಾವಿದ್ಯಾಲಯ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಗದಗ ಜಿಲ್ಲಾ ಯೋಗ ಒಕ್ಕೂಟ, ಗದಗ ಜಿಲ್ಲಾ ಅಮೇಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಷನ್, ಬಸವ ಯೋಗ ಚಿಂತನ ಕೂಟ, ಶ್ರೀ ಕುಮಾರೇಶ್ವರ ಯೋಗ ಜೀಮ್ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರ ಪರವಾಗಿ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ಹಾರ್ದಿಕ ಅಭಿನಂದನೆ ಸಲ್ಲಿಸಿದ್ದಾರೆ.

# ಬಿಸಿಎನ್ ಶಾಲೆಗೆ ಕ್ರೀಡಾಕೂಟದ ಚಾಂಪಿಯನ್‌ಶಿಪ್




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಬಿಸಿಎನ್ ಸ್ಪೆಕ್ಟ್ರಂ ಆಂಗ್ಲ ಮಾಧ್ಯಮ ಶಾಲೆಯ ಹಿರಿಯ ಪ್ರಾಥಮಿಕ ವಿಭಾಗದ ವಿದ್ಯಾರ್ಥಿಗಳು ಗ್ರೂಪ್ ಮಟ್ಟದ ಕ್ರೀಡಾಕೂಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಎರಡನೇ ಬಾರಿಗೆ ಚಾಂಪಿಯನ್‌ಶಿಪ್ ಗೆದ್ದುಕೊಂಡಿದ್ದಾರೆ.

ಸೆ. 10ರಂದು ನಡೆದ ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್ ಸೇರಿದಂತೆ ವಿವಿಧ ವಿಭಾಗಗಳಲ್ಲಿ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದರು. ಶಶಿಧರ ನಂದೆಣ್ಣವರ 100 ಮೀ. ಓಟ, 80 ಮೀ. ಹರ್ಡಲ್ಸ್ ಹಾಗೂ ಉದ್ದ ಜಿಗಿತದಲ್ಲಿ, ವರ್ಷಿತಾ ವಾಲ್ಮೀಕಿ ಎತ್ತರ ಜಿಗಿತ, 80 ಮೀ. ಹರ್ಡಲ್ಸ್ ಹಾಗೂ 200 ಮೀ. ಓಟದಲ್ಲಿ ವೈಯಕ್ತಿಕ ವೀರಾಗ್ರಣಿ ಪ್ರಶಸ್ತಿ ಪಡೆದರು.

ಪವಿತ್ರ ಓಂಕಾರಿ 400 ಮೀ. ಓಟ ಹಾಗೂ ಎತ್ತರ ಜಿಗಿತ, ಫಿಜಾ ಕೌಸರ್ ಕಣವಿ 400 ಮೀ. ಓಟ, ಮಣಿಕಂಠ ಬನ್ನಿ ಚಕ್ರ ಎಸೆತ ಹಾಗೂ ಸೈಯದ್ ಮುಸ್ತಾಕೀನ್ 100 ಮೀ. ಓಟದಲ್ಲಿ ಉತ್ತಮ ಪ್ರದರ್ಶನ ನೀಡಿದರು.

ಬಾಲಕರ ವಾಲಿಬಾಲ್, ಥ್ರೋಬಾಲ್, ಬಾಲಕಿಯರ ಕಬಡ್ಡಿ ಹಾಗೂ ರಿಲೇ ಸ್ಪರ್ಧೆಗಳಲ್ಲೂ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿದರು. ಒಟ್ಟಾರೆ 91 ಅಂಕ ಗಳಿಸಿದ ಶಾಲಾ ತಂಡ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಅರ್ಹತೆ ಪಡೆದಿದೆ.

ವಿದ್ಯಾರ್ಥಿಗಳ ಸಾಧನೆಗೆ ಆಡಳಿತ ಮಂಡಳಿ, ಪ್ರಾಂಶುಪಾಲರು ಹಾಗೂ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ. ಕ್ರೀಡೆಯ ಮೂಲಕ ವಿದ್ಯಾರ್ಥಿಗಳಲ್ಲಿ ದೈಹಿಕ ಆರೋಗ್ಯ, ಶಿಸ್ತು ಹಾಗೂ ಆತ್ಮವಿಶ್ವಾಸ ಬೆಳೆಸುವ ಉದ್ದೇಶದಿಂದ ನಿರಂತರ ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ನಿರ್ದೇಶಕ ಲೋಹಿತ ನೆಲವಗಿ ತಿಳಿಸಿದ್ದಾರೆ.

## ಯೋಜನೆಗಳ ಫಲ ಬಡವರಿಗೆ ತಲುಪಿಸಲು ಸಚಿವರಿಗೆ ಮನವಿ

# ಅಲ್ಪಸಂಖ್ಯಾತರ ಜನಸಂಖ್ಯೆ ಆಧಾರದಲ್ಲಿ ಅನುದಾನ ನೀಡಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಅಲ್ಪಸಂಖ್ಯಾತ ಸಮುದಾಯದ ಜನಸಂಖ್ಯೆ ಆಧಾರದಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನ ಮಂಜೂರು ಮಾಡಿ, ಅರ್ಹ ಬಡ ಕುಟುಂಬಗಳಿಗೆ ಯೋಜನೆಗಳ ಪ್ರಯೋಜನ ತಲುಪಿಸಬೇಕು ಎಂದು ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಸಮಿತಿ ಹಾಗೂ ಗದಗ ಜಿಲ್ಲಾ ಅಲ್ಪಸಂಖ್ಯಾತರ ಹೋರಾಟ ಸಮಿತಿ ವತಿಯಿಂದ ಆರೋಗ್ಯ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯ ಅಲ್ಪಸಂಖ್ಯಾತ ಸಮುದಾಯದ ಕುಟುಂಬಗಳು ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದ್ದು, ಅವರನ್ನು ಮುಖ್ಯವಾಹಿನಿಗೆ ತರಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವು ಯೋಜನೆಗಳನ್ನು ಜಾರಿಗೊಳಿಸಿವೆ. ಕೋಟ್ಯಂತರ ರೂಪಾಯಿ ಅನುದಾನ ಮೀಸಲಿಟ್ಟಿದ್ದರೂ ಜಿಲ್ಲೆಯ ಬಡ ಅಲ್ಪಸಂಖ್ಯಾತ ಕುಟುಂಬಗಳಿಗೆ ಯೋಜನೆಗಳ ಸಮರ್ಪಕ ಪ್ರಯೋಜನ ದೊರೆಯುತ್ತಿಲ್ಲ ಎಂದು ಮನವಿದಾರರು ಆರೋಪಿಸಿದ್ದಾರೆ.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, ಜಿಲ್ಲೆಯಲ್ಲಿ ಸಾವಿರಾರು ಬಡ ಅಲ್ಪಸಂಖ್ಯಾತ ಕುಟುಂಬಗಳು ಕಟ್ಟಡ ಕಾರ್ಮಿಕರು, ಹಮಾಲಿ ಕಾರ್ಮಿಕರು, ಅಸಂಘಟಿತ ಕಾರ್ಮಿಕರು ಸೇರಿದಂತೆ ವಿವಿಧ ಶ್ರಮಿಕ ವೃತ್ತಿಗಳಲ್ಲಿ ದುಡಿಯುತ್ತಿದ್ದಾರೆ. ಸ್ವಯಂ ಉದ್ಯೋಗ ಹಾಗೂ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗುವ ಉದ್ದೇಶದಿಂದ ಸರ್ಕಾರ ಸಹಾಯಧನ ಮತ್ತು ಸಬ್ಸಿಡಿ ನೀಡುತ್ತಿದ್ದರೂ ಅರ್ಹರಿಗೆ ಯೋಜನೆಗಳ ಮಾಹಿತಿ ಹಾಗೂ ಸೌಲಭ್ಯ ಸಮರ್ಪಕವಾಗಿ ತಲುಪುತ್ತಿಲ್ಲ ಎಂದರು.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ, ಅರಿವು, ಮೈಕ್ರೊ ಸಾಲ, ಶ್ರಮಶಕ್ತಿ, ಭೂ ಒಡೆತನ ಹಾಗೂ ಪ್ರವಾಸಿ ಟ್ಯಾಕ್ಸಿ ಸೇರಿದಂತೆ ಹಲವು ಯೋಜನೆಗಳಿಗೆ ಪ್ರತಿವರ್ಷ ಅನುದಾನ ನೀಡಲಾಗುತ್ತಿದೆ. ಆದರೆ ಅಧಿಕಾರಿಗಳು ಮತ್ತು ಸಿಬ್ಬಂದಿಯ ನಿರ್ಲಕ್ಷ್ಯದಿಂದ ಬಡ ಕುಟುಂಬಗಳು ಯೋಜನೆಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಆರೋಪಿಸಿದರು.

ಯೋಜನೆಗಳ ಅನುಷ್ಠಾನದಲ್ಲಿ ಮಧ್ಯವರ್ತಿಗಳ ಹಾವಳಿ ಹಾಗೂ ಕಮಿಷನ್ ಆಧಾರಿತ ವ್ಯವಸ್ಥೆ ಇದೆ ಎಂಬ ದೂರುಗಳಿದ್ದು, ಇದರಿಂದ ನಿಜವಾದ ಅರ್ಹ ಫಲಾನುಭವಿಗಳಿಗೆ ಅನ್ಯಾಯವಾಗುತ್ತಿದೆ. ಈ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

> ಸರ್ಕಾರ ಕೋಟ್ಯಂತರ ರೂಪಾಯಿ ಅನುದಾನ ನೀಡುತ್ತಿದ್ದರೂ ಅದರ ಫಲ ನಿಜವಾದ ಬಡ ಅಲ್ಪಸಂಖ್ಯಾತ ಕುಟುಂಬಗಳಿಗೆ ತಲುಪದಿದ್ದರೆ ಯೋಜನೆಗಳ ಉದ್ದೇಶವೇ ವಿಫಲವಾಗುತ್ತದೆ. ಜನಸಂಖ್ಯೆ ಆಧಾರದಲ್ಲಿ ಅನುದಾನ ಹೆಚ್ಚಿಸಿ, ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಕಿ ಅರ್ಹರಿಗೆ ನೇರವಾಗಿ ಸೌಲಭ್ಯ ದೊರಕಿಸುವ ವ್ಯವಸ್ಥೆ ಮಾಡಬೇಕು.
> - ಇಮ್ತಿಯಾಜ್ ಆರ್. ಮಾನ್ವಿ, ಅಧ್ಯಕ್ಷರು, ಗದಗ ಜಿಲ್ಲಾ ಸ್ಲಂ ಸಮಿತಿ

ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಕುರಿತು ಮಾಹಿತಿ ನೀಡಲು ಜಿಲ್ಲೆಯಲ್ಲಿ ಮಾಹಿತಿ ಕೇಂದ್ರಗಳನ್ನು ಆರಂಭಿಸಲಾಗಿದ್ದರೂ, ಅಲ್ಪಸಂಖ್ಯಾತರು ವಾಸಿಸುವ ಪ್ರದೇಶಗಳಲ್ಲಿ ಸಮರ್ಪಕ ಮಾಹಿತಿ ಕಾರ್ಯಕ್ರಮಗಳು ನಡೆಯುತ್ತಿಲ್ಲ. ಇದರಿಂದ ಅನೇಕ ಅರ್ಹ ಕುಟುಂಬಗಳು ಯೋಜನೆಗಳ ಪ್ರಯೋಜನದಿಂದ ವಂಚಿತರಾಗುತ್ತಿದ್ದಾರೆ ಎಂದು ತಿಳಿಸಿದರು.

ಕಳೆದ 20 ವರ್ಷಗಳಿಂದ ಒಂದೇ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಕಾರ್ಯವೈಖರಿಯನ್ನೂ ಪರಿಶೀಲಿಸಿ, ಬಡ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ತಲುಪಿಸುವಲ್ಲಿ ವಿಫಲರಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಮನವಿದಾರರು ಆಗ್ರಹಿಸಿದರು.

ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಪುಷ್ಪಾ ಬಿಜಾಪೂರ, ಇಬ್ರಾಹಿಂ ಮುಲ್ಲಾ, ಸಲೀಂ ಹರಿಹರ, ಸಾಕ್ರುಬಾಯಿ ಗೋಸಾವಿ, ಖಾಜಾಸಾಬ ಇಸ್ಮಾಯಿಲನವರ, ದಾದು ಗೋಸಾವಿ, ಮಕ್ತುಮಸಾಬ ಮುಲ್ಲಾನವರ, ಶಂಕ್ರಪ್ಪ ರೋಣದ, ಹುಸೇನ ಮುಲ್ಲಾನವರ, ನಜಮುನಿಸಾ ಮುರಗೋಡ ಸೇರಿದಂತೆ ಸಮಿತಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನಿವೃತ್ತ ಶಿಕ್ಷಕರ ಸೇವೆಗೆ ಗೌರವದ ನಮನ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರ ದಿನಾಚರಣೆ ಅಂಗವಾಗಿ ಯುನಿಕ್ ಚಾರಿಟೇಬಲ್ ಟ್ರಸ್ಟ್ (ರಿ.), ಗದಗ ವತಿಯಿಂದ ಶಿಕ್ಷಣ ಕ್ಷೇತ್ರಕ್ಕೆ ಅಮೂಲ್ಯ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕ–ಶಿಕ್ಷಕಿಯರನ್ನು ಶುಕ್ರವಾರ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ನಿವೃತ್ತ ಶಿಕ್ಷಕರಾದ ಡಾ. ಎಚ್.ಎಂ. ಅತ್ತಾರ, ಜೆ.ಎಂ. ಖೈರಾತಿ, ಎನ್.ಎಂ. ಕಮದೋ ಹಾಗೂ ಎಚ್.ಎ. ಬಾನು ಕಾಗದಗಾರ ಅವರನ್ನು ಸನ್ಮಾನಿಸಲಾಯಿತು. ಹಲವು ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾದ ಅವರ ಸೇವೆಯನ್ನು ಕಾರ್ಯಕ್ರಮದಲ್ಲಿ ಸ್ಮರಿಸಲಾಯಿತು.

ಶಿಕ್ಷಕರು ಕೇವಲ ಪಠ್ಯ ವಿಷಯಗಳನ್ನು ಬೋಧಿಸುವವರಲ್ಲ. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಸ್ಕಾರ, ಮಾನವೀಯತೆ ಹಾಗೂ ಸಾಮಾಜಿಕ ಹೊಣೆಗಾರಿಕೆಯಂತಹ ಮೌಲ್ಯಗಳನ್ನು ಬೆಳೆಸುವ ಮೂಲಕ ಉತ್ತಮ ಸಮಾಜ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ. ಈ ಹಿನ್ನೆಲೆಯಲ್ಲಿ ನಿವೃತ್ತ ಶಿಕ್ಷಕರ ಸೇವೆಯನ್ನು ಗುರುತಿಸಿ ಗೌರವಿಸುವುದು ಇಂದಿನ ಪೀಳಿಗೆಗೆ ಪ್ರೇರಣಾದಾಯಕವಾಗಿದೆ ಎಂದು ಹಿರಿಯ ಕೃಷಿ ವಿಜ್ಞಾನಿ ಡಾ. ಸಿ.ಎಂ. ರಫಿ ಹೇಳಿದರು.

> ವಿದ್ಯಾರ್ಥಿಗಳ ಬದುಕಿನಲ್ಲಿ ಬದಲಾವಣೆ ತರುವ ಶಿಕ್ಷಕರ ಸೇವೆ ನಿವೃತ್ತಿಯೊಂದಿಗೆ ಮುಗಿಯುವುದಿಲ್ಲ. ಅವರ ಅನುಭವ ಮತ್ತು ಆದರ್ಶಗಳು ಮುಂದಿನ ಪೀಳಿಗೆಗೂ ದಾರಿದೀಪವಾಗುತ್ತವೆ.
> - ಡಾ. ಸಿ.ಎಂ. ರಫಿ, ಹಿರಿಯ ಕೃಷಿ ವಿಜ್ಞಾನಿ

ಸನ್ಮಾನ ಸ್ವೀಕರಿಸಿದ ನಿವೃತ್ತ ಶಿಕ್ಷಕರು ತಮ್ಮ ಸೇವಾವಧಿಯ ಅನುಭವಗಳನ್ನು ಹಂಚಿಕೊಂಡು, ಶಿಕ್ಷಕ ವೃತ್ತಿಯಿಂದ ದೊರೆತ ಆತ್ಮತೃಪ್ತಿ ಹಾಗೂ ವಿದ್ಯಾರ್ಥಿಗಳ ಯಶಸ್ಸಿನಲ್ಲಿ ಶಿಕ್ಷಕರಿಗಿರುವ ಸಂತೋಷವನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಯುನಿಕ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಎಂ.ಎ. ಕಾಗದಗಾರ, ಕಾರ್ಯದರ್ಶಿ ನಾಜ್ಮೀನಬಾನು ಚೋರನೂರ, ಖಜಾಂಚಿ ವಾಜೀದಾ ಬಿಜಾಪೂರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ತಾಲೂಕು ಮಟ್ಟದ ಪಿಯು ಕಾಲೇಜುಗಳ ಕ್ರೀಡಾಕೂಟಕ್ಕೆ ಚಾಲನೆ

# ಕ್ರೀಡೆಯಲ್ಲಿ ಕ್ರೀಡಾಸ್ಫೂರ್ತಿಯೇ ಮುಖ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಕ್ರೀಡೆಯಲ್ಲಿ ಸೋಲು–ಗೆಲುವಿಗಿಂತ ಕ್ರೀಡಾಸ್ಫೂರ್ತಿಯಿಂದ ಭಾಗವಹಿಸುವುದು ಮುಖ್ಯ. ಗೆಲುವಿನ ಜತೆಗೆ ಸೋಲನ್ನೂ ಸಮಾನ ಮನೋಭಾವದಿಂದ ಸ್ವೀಕರಿಸುವ ಗುಣ ಕ್ರೀಡಾಪಟುಗಳಲ್ಲಿ ಬೆಳೆಯಬೇಕು ಎಂದು ಮೋಹನ ಲಿಂಬಿಕಾಯಿ ಹೇಳಿದರು.

ಹುಲಕೋಟಿಯ ಸ್ಫೂರ್ತಿ ಸ್ವತಂತ್ರ ಪದವಿಪೂರ್ವ ಕಾಲೇಜು ಮೈದಾನದಲ್ಲಿ 2026–27ನೇ ಸಾಲಿನ ಗದಗ ತಾಲೂಕು ಮಟ್ಟದ 'ಎ' ವಲಯದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿ, ಬಲೂನ್‌ಗಳನ್ನು ಆಕಾಶಕ್ಕೆ ಹಾರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ವಿವಿಧ ಪದವಿಪೂರ್ವ ಕಾಲೇಜುಗಳಿಂದ ಆಗಮಿಸಿದ್ದ ಕ್ರೀಡಾಪಟುಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡರು.

ನಗರಸಭೆ ಮಾಜಿ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಕ್ರೀಡಾಪಟುಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಹಾಕಿ ಕ್ರೀಡಾಂಗಣ, ಒಳಾಂಗಣ ಕ್ರೀಡಾಂಗಣ, ಫುಟ್‌ಬಾಲ್ ಹಾಗೂ ಕ್ರಿಕೆಟ್ ತರಬೇತಿ ಕ್ರೀಡಾಂಗಣಗಳ ಜತೆಗೆ ನಗರದಲ್ಲಿ ನಾಲ್ಕೈದು ಈಜುಕೊಳಗಳನ್ನು ನಿರ್ಮಿಸಲಾಗಿದೆ. ಕ್ರೀಡಾಪಟುಗಳು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.

ರಮೇಶ ಹೊನ್ನಿನಾಯ್ಕರ ಕ್ರೀಡಾಪಟುಗಳನ್ನು ಅಭಿನಂದಿಸಿ, ಪ್ರೋತ್ಸಾಹಿಸಿದರು. ವಿವಿಧ ಕಾಲೇಜುಗಳಿಂದ ಆಗಮಿಸಿದ ಕ್ರೀಡಾಪಟುಗಳಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿತ್ತು. ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ತಂಡಗಳಿಗೆ ಬಹುಮಾನ ವಿತರಿಸಿ ಅಭಿನಂದಿಸಲಾಯಿತು.

> ಕ್ರೀಡೆಯಲ್ಲಿ ಸೋಲು–ಗೆಲುವು ಸಹಜ. ಆದರೆ ಕ್ರೀಡಾ ಮನೋಭಾವದಿಂದ ಸ್ಪರ್ಧಿಸುವುದು ಅತ್ಯಂತ ಮುಖ್ಯ. ಕ್ರೀಡಾಪಟುಗಳು ಗೆಲುವಿನಷ್ಟೇ ಕ್ರೀಡಾಸ್ಫೂರ್ತಿಗೂ ಮಹತ್ವ ನೀಡಬೇಕು.
> - ಮೋಹನ ಲಿಂಬಿಕಾಯಿ

ಕಾರ್ಯಕ್ರಮದಲ್ಲಿ ಅಕ್ಬರಸಾಬ ಬಬರ್ಚಿ, ಜಿ.ಕೆ. ಆದಪ್ಪಗೌಡ್ರ, ಎಸ್.ಕೆ. ಪಾಟೀಲ, ಸಚಿನ್ ಡಿ. ಪಾಟೀಲ, ವ್ಹಿ.ಎಂ. ಪಾಟೀಲ, ಬಿ.ಎನ್. ಪಾಟೀಲ, ಕೃಷ್ಣಾ ಓದುಗೌಡರ, ಚಾಂದಸಾಬ ಕೊಟ್ಟೂರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಪ್ರಾಚಾರ್ಯ ವ್ಹಿ. ಚರಣಕುಮಾರ ಸ್ವಾಗತಿಸಿದರು. ಪ್ರೊ. ಅಶ್ವಿನಿ ಓದುಗೌಡರ ವಂದಿಸಿದರು.

## ಕೇಂದ್ರದ ಯೋಜನೆಗಳನ್ನು ತಲುಪಿಸಿ ಸಂಘಟನೆ ಬಲಪಡಿಸಲು ರಾಜು ಕುರಡಗಿ ಕರೆ

# ಸೇವಾ ಸಂಕಲ್ಪಕ್ಕೆ ಮಹಿಳಾ ಮೋರ್ಚಾ ಸಜ್ಜು



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಮಹಿಳಾ ಮೋರ್ಚಾ ಜಿಲ್ಲಾ ಕಾರ್ಯಕಾರಿಣಿ ಸಭೆ ಹಾಗೂ ಸೇವಾ ಸಂಕಲ್ಪ ಅಭಿಯಾನದ ಕಾರ್ಯಾಗಾರ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳನ್ನು ಮಹಿಳೆಯರಿಗೆ ತಲುಪಿಸುವ ಜತೆಗೆ ಮಹಿಳಾ ಫಲಾನುಭವಿಗಳನ್ನು ಸಂಪರ್ಕಿಸಿ ಸಂಘಟನೆಯ ಶಕ್ತಿ ಹೆಚ್ಚಿಸಿಕೊಳ್ಳಬೇಕು ಎಂದು ಮಹಿಳಾ ಮೋರ್ಚಾ ಪದಾಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

ರಾಜ್ಯ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಶೋಭಾ ನಿಸ್ಸಿಮ್ ಗೌಡ್ರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸೇವಾ ಸಂಕಲ್ಪ ಅಭಿಯಾನದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಬೇಕು. ಕೇಂದ್ರ ಸರ್ಕಾರದ ವತಿಯಿಂದ ನೀಡಲಾಗಿರುವ ಎಲ್ಲ ಸೇವಾ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಮಹಿಳಾ ಮೋರ್ಚಾ ಪದಾಧಿಕಾರಿಗಳು ಮುಂಚೂಣಿಯಲ್ಲಿ ನಿಲ್ಲಬೇಕು ಎಂದರು.

ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ ಮಾತನಾಡಿ, ಮಹಿಳಾ ಮೋರ್ಚಾ ಪದಾಧಿಕಾರಿಗಳು ಒಗ್ಗಟ್ಟಿನಿಂದ ಸೇವಾ ಕಾರ್ಯಗಳನ್ನು ಜಿಲ್ಲಾದ್ಯಂತ ಹಬ್ಬದ ರೀತಿಯಲ್ಲಿ ವಿಜೃಂಭಣೆಯಿಂದ ನಡೆಸೋಣ ಎಂದು ಕರೆ ನೀಡಿದರು.

ಸೇವಾ ಸಂಕಲ್ಪ ಅಭಿಯಾನದ ಜಿಲ್ಲಾ ಸಂಚಾಲಕ ಅನಿಲ್ ಅಬ್ಬಿಗೇರಿ ಮಾತನಾಡಿ, ಸೆ.17ರಿಂದ ಅ.17ರವರೆಗೆ ನಡೆಯಲಿರುವ ಸೇವಾ ಸಂಕಲ್ಪ ಅಭಿಯಾನದ ಅಂಗವಾಗಿ ಕೇಂದ್ರ ಸರ್ಕಾರ ಸೂಚಿಸಿರುವ ವಿವಿಧ ಸೇವಾ ಕಾರ್ಯಗಳ ಕುರಿತು ಮಾಹಿತಿ ನೀಡಿದರು. ಕವಿತಾ ಉಳ್ಳಾಗಡ್ಡಿ ರಾಜ್ಯದಿಂದ ಬಂದಿರುವ ಆದೇಶಗಳ ಕುರಿತು ವಿವರಿಸಿದರು. ಸಾಮಾಜಿಕ ಜಾಲತಾಣಗಳ ಬಳಕೆ ಹಾಗೂ ಅಭಿಯಾನದ ಪ್ರಚಾರದ ಕುರಿತು ಪ್ರೀತಿ ಶಿವಪ್ಪನಮಠ ಮಾಹಿತಿ ಹಂಚಿಕೊಂಡರು.

ವಿಜಯಲಕ್ಷ್ಮೀ ಮಾನ್ವಿ ಸ್ವಾಗತಿಸಿದರು. ಕಸ್ತೂರಿ ಕಮ್ಮಾರ ಪ್ರಾರ್ಥನೆ ನಡೆಸಿಕೊಟ್ಟರು. ಅಶ್ವಿನಿ ಅಂಕಲಕೋಟೆ ನಿರೂಪಿಸಿದರು. ಜ್ಯೋತಿ ಹಾನಗಲ ವಂದಿಸಿದರು.

> ಮಹಿಳಾ ಫಲಾನುಭವಿಗಳನ್ನು ತಲುಪಿ, ಕೇಂದ್ರದ ಯೋಜನೆಗಳ ಪ್ರಯೋಜನವನ್ನು ಅವರಿಗೆ ದೊರಕಿಸುವ ಜತೆಗೆ ಸಂಘಟನೆಯನ್ನು ಇನ್ನಷ್ಟು ಬಲಪಡಿಸಬೇಕು.
> - ರಾಜು ಕುರಡಗಿ, ಬಿಜೆಪಿ ಜಿಲ್ಲಾಧ್ಯಕ್ಷ

ಅರುಣ ಪಾಟೀಲ, ಪಾರ್ವತಿ ಪತ್ತಾರ, ಪೂರ್ಣಿಮಾ ಆಟದ, ಶಾರದಾ ಜವಳಿ, ಸುಜಾತಾ ಕಾಡಪ್ಪನವರ್, ನಿರ್ಮಲ ಪಾಟೀಲ, ಅನುಸೂಯಾ ಸೋಮಗೇರಿ, ಜಯಶ್ರೀ ಉಗಲಾಟದ, ವಂದನ ವೇರನೇಕರ್, ಪಾರ್ವತಿ ಪಟ್ಟಣಶೆಟ್ಟಿ, ಪದ್ಮಿನಿ ಮುತ್ತಲದಿನ್ನಿ, ಕವಿತಾ ಬಂಗಾರಿ, ಮೇಘನಾ ಕೊಟ್ಟೂರ, ಸ್ವಾತಿ ಅಕ್ಕಿ, ರೇಖಾ ಗವಳಿ, ಪುಷ್ಪ ಪೂಜಾರ್, ಶ್ರೀದೇವಿ ಲಕ್ಕಾಪುರ, ನೇತ್ರಾ ಜೋಗಿನ್, ಕೌಶಲ್ಯ ಬದಿ, ಸುನೀತಾ ಹಳ್ಳಿ ಸೇರಿದಂತೆ ಮಹಿಳಾ ಮೋರ್ಚಾದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಕೌಶಲ್ಯ ಕಲಿಸಿ ಸ್ವಾವಲಂಬನೆ ಬೆಳೆಸಿದ ಶಿಕ್ಷಕರಿಗೆ ಗೌರವ



**ವಿಜಯಸಾಕ್ಷಿ ಸುದ್ದಿ, ಗದಗ**

ಕ್ಷಣದ ಜೊತೆಗೆ ಜೀವನೋಪಯೋಗಿ ಕೌಶಲ್ಯಗಳನ್ನು ಕಲಿಸಿ ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿಸುವ ಕಾರ್ಯದಲ್ಲಿ ತೊಡಗಿರುವ ಶಿಕ್ಷಕರನ್ನು ಗದಗ–ಬೆಟಗೇರಿ ಇನ್ನರ್ ವೀಲ್ ಕ್ಲಬ್ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ಸನ್ಮಾನಿಸಲಾಯಿತು.

ನಗರದ ರೋಟರಿ ಐ ಕೇರ್ ಸೆಂಟರ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಆದರ್ಶ ಫೌಂಡೇಶನ್ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ಮೂಲಕ ಹೊಲಿಗೆ ತರಬೇತಿ ನೀಡಿ ಮಹಿಳಾ ಸಬಲೀಕರಣಕ್ಕೆ ಶ್ರಮಿಸುತ್ತಿರುವ ಆದರ್ಶ ಶಿಕ್ಷಣ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಗುರುನಾಥ ಹಬೀಬ, ಮುಖ್ಯ ಶಿಕ್ಷಕರಾದ ಶಿಲ್ಪಾ ಹಬೀಬ, ಅನ್ನಪೂರ್ಣ ದೋಂಗಡಿ, ದೀಪಾ ರಾಯಬಾಗಿ, ದೀಪಾ ಹಬೀಬ್ ಹಾಗೂ ಸಹಾಯಕ ಶಿಕ್ಷಕಿ ಅಂಬಿಕಾ ಬಾಕಳೆ ಅವರನ್ನು ಅಭಿನಂದಿಸಿ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ ಮಾತನಾಡಿ, ಶಿಕ್ಷಕರು ಸಮಾಜದ ಭವಿಷ್ಯ ರೂಪಿಸುವ ಶಿಲ್ಪಿಗಳು. ಶಿಕ್ಷಣದ ಜತೆಗೆ ಜೀವನೋಪಯೋಗಿ ಕೌಶಲ್ಯಗಳನ್ನು ಕಲಿಸುವ ಮೂಲಕ ಮಹಿಳೆಯರು ಸ್ವಾವಲಂಬಿಗಳಾಗಲು ಅವಕಾಶ ಕಲ್ಪಿಸುತ್ತಿರುವ ಶಿಕ್ಷಕರ ಸೇವೆ ಶ್ಲಾಘನೀಯ. ಇಂತಹ ಸೇವಾ ಮನೋಭಾವವನ್ನು ಗೌರವಿಸುವುದು ಇನ್ನರ್ ವೀಲ್ ಕ್ಲಬ್‌ಗೆ ಹೆಮ್ಮೆಯ ಸಂಗತಿ. ಮಹಿಳಾ ಸಬಲೀಕರಣಕ್ಕೆ ಕೌಶಲ್ಯ ತರಬೇತಿಯ ಮೂಲಕ ಮತ್ತಷ್ಟು ಉತ್ತೇಜನ ನೀಡಬೇಕು ಎಂದರು.

ಪರಿಸರ ಸ್ನೇಹಿ ಜೀವನಶೈಲಿಯನ್ನು ಉತ್ತೇಜಿಸುವ ಉದ್ದೇಶದಿಂದ ಇನ್ನರ್ ವೀಲ್ ಬ್ರ್ಯಾಂಡಿಂಗ್ ಹೊಂದಿರುವ ಸ್ಟೇನ್‌ಲೆಸ್ ಸ್ಟೀಲ್ ನೀರಿನ ಬಾಟಲಿಗಳನ್ನು ಶಿಕ್ಷಕರಿಗೆ ಉಡುಗೊರೆಯಾಗಿ ನೀಡಿ ಸನ್ಮಾನಿಸಲಾಯಿತು.

ಪಿಡಿಸಿ ಪ್ರೇಮಾ ಗುಳಗೌಡ ಮಾತನಾಡಿ, ವೃತ್ತಿ ಶಿಕ್ಷಣವು ಹೆಣ್ಣುಮಕ್ಕಳು ತಮ್ಮ ಜೀವನವನ್ನು ರೂಪಿಸಿಕೊಳ್ಳಲು ಹಾಗೂ ಭವಿಷ್ಯದಲ್ಲಿ ಸ್ವಾವಲಂಬಿಗಳಾಗಲು ಬಹಳಷ್ಟು ಸಹಾಯ ಮಾಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಪೂಜಾ ಭೂಮಾ, ಉಪಾಧ್ಯಕ್ಷೆ ಶಿವಲೀಲಾ ಅಕ್ಕಿ, ಸಹ ಕಾರ್ಯದರ್ಶಿ ಪುಷ್ಪಾ ಭಂಡಾರಿ, ಸಂಪಾದಕಿ ಮೀನಾಕ್ಷಿ ಕೊರವನವರ, ಖಜಾಂಚಿ ವೀಣಾ ಕಾವೇರಿ, ಐಎಸ್‌ಓ ವಿದ್ಯಾ ಶಿವನಗುತ್ತಿ, ಕ್ಲಬ್‌ನ ಮಾಜಿ ಅಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಸಣ್ಣ ಸುದ್ದಿಗಳು

### ನಿಧನ

#### ಮಹಮ್ಮದ್ ಇಕ್ಬಾಲ್ ನಾಯ್ಕರ



ಗದಗ: ನಗರದ ಜವುಳಗಲ್ಲಿ, ಅಬ್ಬಿಗೇರಿ ಫ್ಯಾಕ್ಟರಿ ಸಮೀಪದ ನಿವಾಸಿ ಮಹಮ್ಮದ್ ಇಕ್ಬಾಲ್ ಬಾಬುಸಾಬ ನಾಯ್ಕರ (58) ಅವರು ಭಾನುವಾರ ಸಂಜೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ, ಸಹೋದರರು, ಸಹೋದರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತಿಮಯಾತ್ರೆ ಸೋಮವಾರ ಮಧ್ಯಾಹ್ನ 12 ಗಂಟೆಗೆ ಅವರ ಸ್ವಗೃಹದಿಂದ ಹೊರಡಲಿದೆ.

### ಶಿಕ್ಷಕರಿಗೆ ಇನ್ನರ್‌ವ್ಹೀಲ್ ಕ್ಲಬ್‌ನಿಂದ ಸನ್ಮಾನ

ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಸರ್ಕಾರಿ ಶಾಲೆಗಳ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸುವುದರ ಜತೆಗೆ ಶಿಕ್ಷಕ ಸಮುದಾಯಕ್ಕೂ ಸ್ಫೂರ್ತಿ ನೀಡುತ್ತ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು. ಗದಗ ರೋಟರಿ ಐ ಕೇರ್ ಸೆಂಟರ್‌ನಲ್ಲಿ ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ವತಿಯಿಂದ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಕ್ಲಬ್‌ನ ಪಿ.ಡಿ.ಸಿ. (ಪಾಸ್ಟ್ ಡಿಸ್ಟ್ರಿಕ್ಟ್ ಚೇರ್‌ಮನ್) ಪ್ರೇಮಾ ಗುಳಗೌಡರ ಹಾಗೂ ಅಧ್ಯಕ್ಷೆ ಮಂಜುಳಾ ಅಕ್ಕಿ ಅವರನ್ನು ಸನ್ಮಾನಿಸಿ ಅವರು ಮಾತನಾಡಿದರು. ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದುದು. ವಿದ್ಯಾರ್ಥಿಗಳ ಯಶಸ್ಸಿನಲ್ಲಿಯೇ ಶಿಕ್ಷಕರ ನಿಜವಾದ ಯಶಸ್ಸು ಅಡಗಿದೆ. ಮಕ್ಕಳೊಂದಿಗೆ ಆತ್ಮೀಯ ಒಡನಾಟ ಹೊಂದಿ ಬೋಧನೆಯನ್ನೇ ಗುರಿಯಾಗಿಸಿಕೊಂಡು ಅವರ ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸುತ್ತಿರುವ ಗುರುಬಳಗವನ್ನು ಸನ್ಮಾನಿಸಿ, ಗೌರವಿಸಿ ಪ್ರೋತ್ಸಾಹಿಸುತ್ತಿರುವ ಇನ್ನರ್‌ವ್ಹೀಲ್ ಕ್ಲಬ್‌ನ ಕಾರ್ಯ ಶ್ಲಾಘನೀಯ ಎಂದರು.

#### ಶ್ರೀಗಳ ಆಶೀರ್ವಾದ, ತಾಯಿಯ ಸಂಸ್ಕಾರದಿಂದ ಸ್ಪೀಕರ್ ಸ್ಥಾನ

# ಸಂಸ್ಕಾರವೇ ನನ್ನ ಶಕ್ತಿ: ಜಿ.ಎಸ್. ಪಾಟೀಲ

ವಿಜಯಸಾಕ್ಷಿ ಸುದ್ದಿ, ಗದಗ



ತಾಯಿ ಹಾಗೂ ಹಿರಿಯರು ತಮ್ಮನ್ನು ಮತ್ತು ಸಹೋದರರನ್ನು ಪ್ರೀತಿ ಹಾಗೂ ಸಂಸ್ಕಾರದಿಂದ ಬೆಳೆಸಿದ್ದಾರೆ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯುತ್ತಿದ್ದೇವೆ. ಲಿಂಗೈಕ್ಯ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು, ಹಾಳಕೇರಿಯ ಅಭಿನವ ಅನ್ನದಾನ ಮಹಾಸ್ವಾಮಿಗಳು, ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹಾಗೂ ತಮ್ಮೆಲ್ಲರ ಶುಭ ಹಾರೈಕೆಗಳು ತಾವು ಈ ಉನ್ನತ ಸ್ಥಾನಕ್ಕೇರಲು ಕಾರಣವಾಗಿವೆ ಎಂದು ನೂತನ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2814ನೇ ಶಿವಾನುಭವದಲ್ಲಿ ಗೌರವ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದುದು. ದೇಶದ ಭದ್ರಬುನಾದಿ, ಏಳಿಗೆ ಹಾಗೂ ಭವಿಷ್ಯಕ್ಕೆ ಉತ್ತಮ ಮಕ್ಕಳೇ ಆಧಾರ. ಮಕ್ಕಳಲ್ಲಿ ಸದ್ಗುಣಗಳು ಬೆಳೆಯುವಂತೆ ಮಾಡುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾದುದು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಶಿವಾನುಭವದ ಸಾನ್ನಿಧ್ಯ ವಹಿಸಿ ಹೇಳಿದರು.

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಸಾವಿತ್ರಿಬಾಯಿ ಫುಲೆ ಅವರು ಈ ನಾಡು ಕಂಡ ಶ್ರೇಷ್ಠ ಶಿಕ್ಷಕರು. ಮಕ್ಕಳಿಗೆ ತಾಯಿಯೇ ಮೊದಲ ಗುರು. ಮಕ್ಕಳಲ್ಲಿ ಉತ್ತಮ ಸಂಸ್ಕಾರ, ನಡೆ-ನುಡಿ ಹಾಗೂ ಆದರ್ಶಗಳನ್ನು ತುಂಬಬೇಕು. ಇಂದಿನ ಮಕ್ಕಳೇ ದೇಶದ ಮುಂದಿನ ಪ್ರಜೆಗಳು. ದೇಶ ಅಭಿವೃದ್ಧಿ ಹೊಂದಬೇಕಾದರೆ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸಬೇಕು ಎಂದರು. ಈ ಸಂದರ್ಭದಲ್ಲಿ ವಿಧಾನಸಭಾಧ್ಯಕ್ಷರಾಗಿ ಆಯ್ಕೆಯಾದ ಜಿ.ಎಸ್. ಪಾಟೀಲ ಅವರನ್ನು ಶ್ರೀಗಳು ಸನ್ಮಾನಿಸಿ ಶುಭ ಹಾರೈಸಿದರು.

ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ ಮುಖ್ಯ ಅತಿಥಿಗಳಾಗಿ ಮಾತನಾಡಿ, ಜಿ.ಎಸ್. ಪಾಟೀಲ ಅವರು ವಿಧಾನಸಭಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಸಂತಸ ತಂದಿದೆ. ಅವರ ಅವಧಿಯಲ್ಲಿ ವಿಧಾನಸಭೆಯ ಕಾರ್ಯಕಲಾಪಗಳು ಅರ್ಥಪೂರ್ಣವಾಗಿ ನಡೆಯಲಿ ಎಂದು ಹಾರೈಸಿದರು.

ಮಕ್ಕಳನ್ನು ಸತ್ಪ್ರಜೆಗಳನ್ನಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ದೊಡ್ಡದು. ಹೆಚ್ಚಿನ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಆತಂಕಕಾರಿ. ಮಕ್ಕಳ ಮೇಲೆ ಪಾಲಕರು ಹೆಚ್ಚಿನ ಗಮನ ಹರಿಸಬೇಕು ಎಂದರು.

ಶಿವಾನುಭವದ ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ಜಿ.ಎಸ್. ಪಾಟೀಲ ಅವರು ತಮ್ಮ ತಾಯಿಯ ಆಶೀರ್ವಾದದ ಬಲದಿಂದ ವಿಧಾನಸಭಾಧ್ಯಕ್ಷ ಸ್ಥಾನ ಪಡೆಯಲು ಸಾಧ್ಯವಾಗಿದೆ. ಅವರಿಗೆ ಬಸವಾದಿ ಶಿವಶರಣರ ಆಶೀರ್ವಾದ ಸದಾಕಾಲ ಇರಲಿ ಎಂದು ಹಾರೈಸಿದರು.

ಶಿಕ್ಷಕರ ದಿನಾಚರಣೆ ಅಂಗವಾಗಿ ನಾಡೋಜ ಡಾ. ಚನ್ನವೀರ ಕಣವಿ ಅವರ ತಂದೆ ಲಿಂಗೈಕ್ಯ ಸಕ್ರಪ್ಪ ಕಣವಿ ಹಾಗೂ ಶಿಕ್ಷಣ ತಜ್ಞ ಡಾ. ಬಿ. ಮಲ್ಲಿಕಾರ್ಜುನ ಅವರ ತಂದೆ ಲಿಂಗೈಕ್ಯ ಬಳ್ಳಾರಿ ಚಿತ್ರಕಿ ಕೊಟ್ರಪ್ಪ ಅವರ ಸ್ಮರಣಾರ್ಥ ನೀಡಲಾಗುವ ಆದರ್ಶ ಶಿಕ್ಷಕ ಪ್ರಶಸ್ತಿಯನ್ನು ಆಲಮಟ್ಟಿಯ ಹಳಕಟ್ಟಿ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ ಜಿ.ಎಂ. ಕೋಟ್ಯಾಳ ಹಾಗೂ ಬೆಳ್ಳಟ್ಟಿಯ ಎಸ್.ಜೆ.ಎಫ್. ಪ್ರೌಢಶಾಲೆಯ ಕನ್ನಡ ಶಿಕ್ಷಕಿ ಮಹೇಶ್ವರಿ ಸಿದ್ದರಾಮಪ್ಪ ಸವಡಿ ಅವರಿಗೆ ಪರಮಪೂಜ್ಯರು ಪ್ರಧಾನ ಮಾಡಿದರು. ಗಿರಿಜಕ್ಕ ಧರ್ಮರಡ್ಡಿ ಅವರು ಶ್ರಾವಣ ಮಾಸದಲ್ಲಿ 'ಶರಣರು ಕಂಡ ಅನಾದಿ ಬಸವಣ್ಣ' ವಿಷಯದ ಕುರಿತು ನೀಡಿದ ಪ್ರವಚನದ ಮಂಗಲೋತ್ಸವ ನಡೆಯಿತು. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ವಿದ್ಯಾರ್ಥಿನಿ ಕಾವೇರಿ ಬಡಿಗೇರ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಲಿಂಗೈಕ್ಯರಾದ ಶರಣೆ ರತ್ನಕ್ಕ ಬಸನಗೌಡ ಪಾಟೀಲ ಹಾಗೂ ಬಸವದಳದ ಮಾಜಿ ಅಧ್ಯಕ್ಷ ಹೂಗಾರ ಅವರ ಅಗಲಿಕೆಗೆ ಮೌನಾಚರಣೆ ನಡೆಸಿ ಸಂತಾಪ ಸೂಚಿಸಲಾಯಿತು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ, ಧರ್ಮಗ್ರಂಥ ಪಠಣವನ್ನು ಸಂಜನಾ ಎಂ. ಹದ್ಲಿ ಹಾಗೂ ವಚನ ಚಿಂತನವನ್ನು

> ತಾಯಿಯ ಆಶೀರ್ವಾದದ ಬಲದಿಂದ ಜಿ.ಎಸ್. ಪಾಟೀಲ ಅವರು ವಿಧಾನಸಭಾಧ್ಯಕ್ಷ ಸ್ಥಾನ ಪಡೆಯಲು ಸಾಧ್ಯವಾಗಿದೆ. ಅವರಿಗೆ ಬಸವಾದಿ ಶಿವಶರಣರ ಆಶೀರ್ವಾದ ಸದಾಕಾಲ ಇರಲಿ.
> – **ಎಸ್.ಎಸ್. ಪಾಟೀಲ, ಮಾಜಿ ಸಚಿವ**

ಸನ್ನಿಧಿ ಎಂ. ಹದ್ಲಿ ನಡೆಸಿಕೊಟ್ಟರು. ಕಾರಟಗಿಯ ಎಲ್.ವಿ.ಟಿ. ಮಾಲೀಕ ಸಣ್ಣಸೂಗಪ್ಪ, ಹುಬ್ಬಳ್ಳಿಯ ಡಾ. ಎಸ್. ಎಸ್. ಅಕ್ಕಮಹಾದೇವಿ, ವೀರಣ್ಣ ಬೇವಿನಮರದ ಹಾಗೂ 2026ನೇ ಸಾಲಿನ ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿಯ ಪದಾಧಿಕಾರಿಗಳು ದಾಸೋಹ ಸೇವೆ ವಹಿಸಿಕೊಂಡಿದ್ದರು.

ಶಿವಾನುಭವ ಸಮಿತಿಯ ಚೇರ್ಮನ್ ಡಾ. ರಮೇಶ ಕಲ್ಲನಗೌಡರ ನಿರೂಪಿಸಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು.

ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ಧರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇ-ರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತ-ರಿದ್ದರು.

## ಭಕ್ತರ ಜಯಘೋಷದೊಂದಿಗೆ ಶ್ರೀ ವೀರಭದ್ರೇಶ್ವರ ರಥೋತ್ಸವ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಶನಿವಾರ ಸಂಜೆ ನಡೆದ ಅದ್ದೂರಿ ರಥೋತ್ಸವವು ಸಾವಿರಾರು ಭಕ್ತರ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮಕ್ಕೆ ಸಾಕ್ಷಿಯಾಯಿತು. ಅಲಂಕೃತ ತೇರಿನತ್ತ ನೆಟ್ಟ ನೂರಾರು ಕಣ್ಣುಗಳು, ಕೈಯಲ್ಲಿ ಆರತಿ ತಟ್ಟೆ ಹಿಡಿದು ಸಾಗಿದ ಮಹಿಳೆಯರು, ಮೊಳಗಿದ ಜಯಘೋಷಗಳು ಹಾಗೂ ವಾದ್ಯಗಳ ನಾದದಿಂದ ಪಟ್ಟಣವೇ ಭಕ್ತಿಸಾಗರವಾಗಿ ಕಂಗೊಳಿಸಿತು.

ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಹಾಲಕೆರೆ ಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಅಮೃತ ಹಸ್ತದಿಂದ ಕೇಸರಿ ಧ್ವಜ ಹಾರಿಸುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ತೇರು ಚಲನೆ ಆರಂಭವಾಗುತ್ತಿದ್ದಂತೆ ಭಕ್ತರ ಹರ್ಷೋದ್ಗಾರ ಮುಗಿಲು ಮುಟ್ಟಿತು.

ದೇವಸ್ಥಾನದ ಆವರಣದಿಂದ ಅಲಂಕೃತ ರಥ ಹೊರಟ ಕ್ಷಣದಿಂದಲೇ ರಸ್ತೆಯ ಇಕ್ಕೆಲಗಳಲ್ಲಿ ಭಕ್ತರ ದಂಡೇ ನೆರೆದಿತ್ತು. ರಥ ಸಾಗುವ ಮಾರ್ಗದುದ್ದಕ್ಕೂ ಭಕ್ತರು ಬಾಳೆಹಣ್ಣು, ಹೂವುಗಳನ್ನು ರಥದ ಮೇಲೆ ಅರ್ಪಿಸಿ ಭಕ್ತಿಭಾವ ಮೆರೆದರು. 'ಹರ ಹರ ಮಹಾದೇವ', 'ವೀರಭದ್ರ ಮಹಾರಾಜ್ ಕೀ ಜೈ' ಎಂಬ ಜಯಘೋಷಗಳು ಮೊಳಗಿದವು.

ಮಹಿಳೆಯರು ಕೈಯಲ್ಲಿ ಆರತಿ ತಟ್ಟೆ ಹಿಡಿದು ತೇರಿನೊಂದಿಗೆ ಸಾಗಿದ್ದು ರಥೋತ್ಸವದ ವೈಭವಕ್ಕೆ ಮತ್ತಷ್ಟು ಮೆರುಗು ನೀಡಿತು. ಮಕ್ಕಳು, ಯುವಕರು, ವೃದ್ಧರು ಸೇರಿದಂತೆ ಎಲ್ಲ ವಯೋಮಾನದ ಭಕ್ತರು ಉತ್ಸಾಹದಿಂದ ಪಾಲ್ಗೊಂಡರು. ಡೊಳ್ಳು, ಭಜನೆ ಹಾಗೂ ವಿವಿಧ ವಾದ್ಯಗಳ ನಾದಕ್ಕೆ ಹೆಜ್ಜೆ ಹಾಕಿದ ಭಕ್ತರು ಸಂಭ್ರಮಿಸಿದರು.

ರಥ ಸಾಗುವ ದಾರಿಯುದ್ದಕ್ಕೂ ಮನೆಗಳ ಮುಂದೆ ಹಾಗೂ ಪ್ರಮುಖ ಸ್ಥಳಗಳಲ್ಲಿ ಭಕ್ತರು ರಥಕ್ಕೆ ಪೂಜೆ ಸಲ್ಲಿಸಿ, ಹೂವುಗಳನ್ನು ಅರ್ಪಿಸಿ ನಮಿಸಿದರು. ಹಲವರು ತಮ್ಮ ಹರಕೆಗಳನ್ನು ತೀ-ರಿಸಿಕೊಂಡು ಶ್ರೀ ವೀರಭದ್ರೇಶ್ವರನಿಗೆ ಕೃತಜ್ಞತೆ ಸಲ್ಲಿಸಿದರು. ಕೆಲವರ ಕಣ್ಣುಗಳಲ್ಲಿ ಭಕ್ತಿಯ ಕಣ್ಣೀರು, ಇನ್ನು ಕೆಲವರ ಮುಖದಲ್ಲಿ ಹರಕೆ ನೆರವೇರಿದ ಸಂತಸ ಕಂಡುಬಂತು. ತೇರಿನೋತ್ಸವವು ಭಕ್ತರ ನಂಬಿಕೆ ಮತ್ತು ಭಾವನೆಗಳಿಗೆ ಜೀವಂತ ಸಾಕ್ಷಿಯಾಯಿತು. ರಥವು ನಿಧಾನವಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ನಾಗರಕೆರೆ ಸಮೀಪದ ಈರಣ್ಣನ ಪಾದದವರೆಗೆ ತಲುಪಿದಾಗ ಭಕ್ತರ ಸಂಭ್ರಮ ಮತ್ತಷ್ಟು ಹೆಚ್ಚಾಯಿತು. ಚಪ್ಪಾಳೆ, ಜಯಘೋಷ ಹಾಗೂ ಭಕ್ತಿಗೀತೆಗಳ ನಡುವೆ ಭಕ್ತರು ರಥವನ್ನು ಬರಮಾಡಿಕೊಂಡರು.


ರಥೋತ್ಸವದ ಹಿನ್ನೆಲೆಯಲ್ಲಿ ಪಟ್ಟಣದ ಪ್ರಮುಖ ಬೀದಿಗಳು ಜನರಿಂದ ತುಂಬಿ ತುಳುಕುತ್ತಿದ್ದವು. ಎಲ್ಲೆಡೆ ಜಾತ್ರೆಯ ಸಡಗರ, ಭಕ್ತಿಗೀತೆಗಳ ಮೊಳಗು, ಡೊಳ್ಳಿನ ನಾದ ಹಾಗೂ ಜಯಘೋಷಗಳು ಕೇಳಿಬರುತ್ತಿದ್ದವು. ಹಲವು ವರ್ಷಗಳಿಂದ ನಡೆದುಕೊಂಡು ಬಂದಿರುವ ಧಾರ್ಮಿಕ ಪರಂಪರೆಯನ್ನು ಮುಂದುವರಿಸುವ ಈ ತೇರಿನೋತ್ಸವವು ನರೇಗಲ್ಲಿನ ಜನರ ಭಕ್ತಿ ಹಾಗೂ ಸಾಮೂಹಿಕ ಒಗ್ಗಟ್ಟಿನ ಪ್ರತೀಕವಾಗಿ ಕಂಗೊಳಿಸಿತು.

ಸುತ್ತಮುತ್ತಲಿನ ಗ್ರಾಮಗಳಿಂದಲೂ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ಬಂಧು-ಬಳಗ ಹಾಗೂ ಸ್ನೇಹಿತರೊಂದಿಗೆ ಆಗಮಿಸಿದ ಜನರು ರಥೋತ್ಸವದ ವೈಭವವನ್ನು ಕಣ್ತುಂಬಿಕೊಂಡರು. ಹಿರಿಯರು ಮಕ್ಕಳಿಗೆ ಜಾತ್ರೆಯ ಮಹತ್ವವನ್ನು ವಿವರಿಸುತ್ತಿದ್ದ ದೃಶ್ಯವೂ ಕಂಡುಬಂತು.

ಒಟ್ಟಾರೆ, ಶ್ರೀ ವೀರಭದ್ರೇಶ್ವರನ ತೇ-ರಿನೋತ್ಸವವು ಕೇವಲ ರಥದ ಸಂಚಾರವಾಗದೆ, ಭಕ್ತಿ, ಪರಂಪರೆ, ನಂಬಿಕೆ, ಕುಟುಂಬ ಬಂಧ ಹಾಗೂ ಊರಿನ ಒಗ್ಗಟ್ಟನ್ನು ಒಂದೆಡೆ ಸೇರಿಸಿದ ಅಪೂರ್ವ ಧಾರ್ಮಿಕ ಸಂಭ್ರಮವಾಗಿ ಮೂಡಿಬಂತು. ರಥ ಸಾಗಿದ ದಾರಿಯುದ್ದಕ್ಕೂ ಮೊಳಗಿದ ಜಯಘೋಷಗಳು ಹಾಗೂ ಭಕ್ತರ ಮುಖದಲ್ಲಿದ್ದ ಸಂತಸ ಜಾತ್ರೆಯ ಸಾರ್ಥಕತೆಯನ್ನು ಸಾರಿದವು.

## ಸಂಗೀತ ಲೋಕದ ಸಿದ್ಧಿ ಪುರುಷ ಡಾ. ಮಲ್ಲಿಕಾರ್ಜುನ ಮನಸೂರ

ವಿಜಯಸಾಕ್ಷಿ ಸುದ್ದಿ, ಧಾರವಾಡ



> ಮನಸೂರರ ಸಂಗೀತ ಸಾಧನೆ ಮಾತ್ರವಲ್ಲ, ಅವರ ಶಿಸ್ತು, ಸರಳತೆ ಮತ್ತು ಸಜ್ಜನಿಕೆಯ ಬದುಕೂ ಇಂದಿನ ಯುವ ಕಲಾವಿದರಿಗೆ ಆದರ್ಶವಾಗಬೇಕು. ಹಿರಿಯರ ಸಾಧನೆಯ ಹೆಜ್ಜೆಗುರುತುಗಳನ್ನು ಅನುಸರಿಸಿದಾಗ ಮಾತ್ರ ಸಂಗೀತ ಕ್ಷೇತ್ರ ಮತ್ತಷ್ಟು ಶ್ರೀಮಂತವಾಗುತ್ತದೆ.
> – **ಪಂ. ರಾಚಯ್ಯ ಹಿರೇಮಠ**

ಶಿಸ್ತು, ಸರಳತೆ ಹಾಗೂ ಸಜ್ಜನಿಕೆಯನ್ನೇ ಬದುಕಿನ ಮೌಲ್ಯವಾಗಿಸಿಕೊಂಡು ಸಂಗೀತ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿದ ಪದ್ಮವಿಭೂಷಣ ಡಾ. ಮಲ್ಲಿಕಾರ್ಜುನ ಮನಸೂರ ಅವರು ನಿಜಾರ್ಥದಲ್ಲಿ ಸಿದ್ಧಿ ಪುರುಷರಾಗಿದ್ದರು ಎಂದು ಹಿರಿಯ ಸಂಗೀತ ಕಲಾವಿದ ಪಂ. ರಾಚಯ್ಯ ಹಿರೇಮಠ ಬಣ್ಣಿಸಿದರು.

ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಸೆ. 12ರಂದು ಡಾ. ಮಲ್ಲಿಕಾರ್ಜುನ ಮನಸೂರ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಮನಸೂರರ 34ನೇ ಪುಣ್ಯಸ್ಮರಣೆ ಅಂಗವಾಗಿ ನಡೆದ ವಿಶೇಷ ಸಂಗೀತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಗೀತ ಕ್ಷೇತ್ರದಲ್ಲಿ ಮನಸೂರರು ಸಾಧಿಸಿದ ಎತ್ತರ ಸಾಮಾನ್ಯ ಸಾಧನೆಯಲ್ಲ. ಶಿಸ್ತುಬದ್ಧ ಜೀವನ, ಸರಳ ವ್ಯಕ್ತಿತ್ವ ಹಾಗೂ ಸಂಗೀತದ ಮೇಲಿನ ಅಪಾರ ಬದ್ಧತೆಯಿಂದ ಅವರು ಅಸಂಖ್ಯಾತ ಕಲಾವಿದರಿಗೆ ಪ್ರೇರಣೆಯಾದರು. ಇಂದಿನ ಯುವ ಕಲಾವಿದರು ಹಿರಿಯ ಸಂಗೀತ ದಿಗ್ಗಜರ ಆದರ್ಶಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು, ಸಂಗೀತ ಸಾಧನೆಯಲ್ಲಿ ಯಶಸ್ಸು ಸಾಧಿಸಬೇಕು ಎಂದು ಕರೆ ನೀಡಿದರು.

ಈ ವೇಳೆ ಮನಸೂರರೊಂದಿಗಿನ ತಮ್ಮ ಒಡನಾಟದ ಆತ್ಮೀಯ ನೆನಪುಗಳನ್ನು ಮೆಲುಕು ಹಾಕಿದ ಪಂ. ರಾಚಯ್ಯ ಹಿರೇಮಠ, ಅವರ ವ್ಯಕ್ತಿತ್ವ ಹಾಗೂ ಸಂಗೀತ ಸಾಧನೆಯ ಹಲವು ಅಪರೂಪದ ಸಂಗತಿಗಳನ್ನು ಹಂಚಿಕೊಂಡರು. ಟ್ರಸ್ಟ್ ಅಧ್ಯಕ್ಷ ಪಂ. ಎಂ. ವೆಂಕಟೇಶಕುಮಾರ ಮಾತನಾಡಿ, ಗುರುವಿನ ಮಾರ್ಗದರ್ಶನ ಬದುಕಿಗೆ ದಾರಿದೀಪವಾಗಿದ್ದು, ಅವರು ಬೋಧಿಸಿದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಗುರುಗಳಿಗೆ ಸಲ್ಲಿಸುವ ನಿಜವಾದ ಗೌರವ ಎಂದರು.

ಗುರುಗಳು ತೋರಿಸುವ ಸನ್ಮಾರ್ಗ ಹಾಗೂ ನೀಡುವ ಮಾರ್ಗದರ್ಶನವನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಎದುರಾಗುವ ಸವಾಲುಗಳನ್ನು ಧೈರ್ಯದಿಂದ ಎದುರಿಸಲು ಸಾಧ್ಯ. ಗುರುಗಳ ಆದರ್ಶ, ವಿಚಾರಧಾರೆ ಹಾಗೂ ಜೀವನ ಮೌಲ್ಯಗಳನ್ನು ಅನುಸರಿಸಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡುವ ಮೂಲಕ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದು ಹೇಳಿದರು.

ಡಾ. ಮಲ್ಲಿಕಾರ್ಜುನ ಮನಸೂರ ಸ್ಮಾರಕ ಭವನದಲ್ಲಿರುವ ಅವರ ಸಮಾಧಿಗೆ ಪೂಜೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು. ಬಳಿಕ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಮನಸೂರರ ಕುಟುಂಬದ ಸದಸ್ಯರು ಹಾಗೂ ಯುವ ಕಲಾವಿದರು ಸಂಗೀತದ ಮೂಲಕ ಸ್ಮರಣಾಂಜಲಿ ಸಲ್ಲಿಸಿದರು.

ಮನಸೂರರ ಮರಿ ಮೊಮ್ಮಗಳು ಮಾನಸಾ ಪಿಳ್ಳೆ ಪ್ರಾರ್ಥನಾ ಗೀತೆ ಪ್ರಸ್ತುತಪಡಿಸಿದರು. ಅವರ ಪುತ್ರಿ ಅಕ್ಕಮಹಾದೇವಿ ಆಲೂರ ವಚನ ಸಂಗೀತದ ಮೂಲಕ ಗಮನ ಸೆಳೆದರು. ಡಾ. ಮಿಥುನ ಚಕ್ರವರ್ತಿ ಶಾಸ್ತ್ರೀಯ ಸಂಗೀತ, ಅಂಕುಶ ನಾಯಕ್ ಸಿತಾರ್ ವಾದನ ಹಾಗೂ ಅರ್ಣವ್ ಬುವಾ ಹಿಂದೂಸ್ಥಾನಿ ಶಾಸ್ತ್ರೀಯ ಗಾಯನ ಪ್ರಸ್ತುತಪಡಿಸಿ ಸಂಗೀತಾಸಕ್ತರನ್ನು ರಂಜಿಸಿದರು. ಟ್ರಸ್ಟ್ ಕಾರ್ಯದರ್ಶಿ ಕುಮಾರ ಬೆಕ್ಕೇರಿ ಸ್ವಾಗತಿಸಿದರು. ಆರತಿ ದೇವಶಿಕಾಮಣಿ ನಿರೂಪಿಸಿ, ವಂದಿಸಿದರು. ಟ್ರಸ್ಟ್ ಸದಸ್ಯರಾದ ಪಂ. ಬಿ.ಎಸ್. ಮಠ, ಡಾ. ಶಾಂತಾರಾಮ ಹೆಗಡೆ ಸೇರಿದಂತೆ ಹಲವು ಸಂಗೀತ ಕಲಾವಿದರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಸಮಾಜ ಸೇವೆಯಲ್ಲಿ ಮಾದರಿಯಾಗಿ

ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕನಕದಾಸ ಶಿಕ್ಷಣ ಸಮಿತಿಯ (ಕೆಎಸ್‌ಎಸ್) ಅಂಗಸಂಸ್ಥೆ ಕನ್ನಡ ಕಿರಣ ಶಿಕ್ಷಣ ಸಮಿತಿಯ ಎಂಎಸ್‌ಡಬ್ಲ್ಯು (ಸಮಾಜ ಕಾರ್ಯ ಸ್ನಾತಕೋತ್ತರ) ವಿಭಾಗದ 2025-26ನೇ ಸಾಲಿನ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಸೆ.12ರಂದು ಕಾಲೇಜಿನ ಸಭಾಂಗಣದಲ್ಲಿ ನಡೆಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸೋಮಲಿಂಗಪ್ಪ ಬೆನಕನವಾರಿ, ವಿದ್ಯಾರ್ಥಿಗಳು ಸಂಸ್ಥೆಯ ಅಧ್ಯಕ್ಷರು ಕಂಡಿರುವ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ನಿರಂತರವಾಗಿ ಶ್ರಮಿಸಬೇಕು. ಸಮಾಜ ಸೇವೆಯಂತಹ ಪವಿತ್ರ ಕ್ಷೇತ್ರದಲ್ಲಿ ಪದವಿ ಪಡೆಯುತ್ತಿರುವ ವಿದ್ಯಾರ್ಥಿಗಳು ಸಮಾಜಕ್ಕೆ ಮಾದ-ರಿಯಾಗಿ ಹೊರಹೊಮ್ಮಬೇಕು ಎಂದು ಕರೆ ನೀಡಿದರು. ಮುಖ್ಯ ಅತಿಥಿಗಳಾಗಿ ಕೆಎಸ್‌ಎಸ್ ಪದವಿ ಕಾಲೇಜಿನ ಪ್ರಾಚಾರ್ಯ ಈಶ್ವರ್ ಪಟ್ಟಣಶೆಟ್ಟರ, ಕೆವಿ-ಎಸ್‌ಆರ್ ಪ್ರೌಢಶಾಲೆಯ ಕನ್ನಡ ಶಿಕ್ಷಕ ಮಹದೇವಪ್ಪ ಬೇವಿನಕಟ್ಟಿ, ಎಂಎಸ್‌ಡಬ್ಲ್ಯು ವಿಭಾಗದ ಸಂಯೋಜಕ ಡಾ.ವಸಂತ ಅಗಸಿಮನಿ, ಪ್ರಾಚಾರ್ಯ ಶ್ರೀಧರ್ ಕಾಂಬಳೆ ಹಾಗೂ ಉಪನ್ಯಾಸಕರಾದ ಶೋಭಾ ಬೆನಕನಾಳ ಮತ್ತು ಪೂಜಾರ ಉಪಸ್ಥಿತರಿದ್ದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

## ಪ್ರಜಾ ಸೇವಾ ಆಂದೋಲನ ಸಭೆ; 184 ಅರ್ಜಿ ಸ್ವೀಕಾರ

ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಸೆ.12ರಂದು ನಡೆದ ಪ್ರಜಾ ಸೇವಾ ಆಂದೋಲನ ಸಭೆಗಳಲ್ಲಿ ಒಟ್ಟಾರೆ 184 ಅರ್ಜಿಗಳು ಸ್ವೀಕೃತವಾಗಿವೆ ಎಂದು ಪ್ರಕಟಣೆ ತಿಳಿಸಿದೆ.

ಅಳ್ನಾವರ ತಾಲೂಕಿನಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ 5 ಅರ್ಜಿಗಳು ಸ್ವೀಕೃತವಾಗಿವೆ. ಅಣ್ಣಿಗೇರಿ ತಾಲೂಕಿನಲ್ಲಿ ಕೃಷಿ ಇಲಾಖೆ ಹಾಗೂ ಹಣಕಾಸು ಇಲಾಖೆಗೆ ಸಂಬಂಧಿಸಿದ ತಲಾ ಒಂದು ಅರ್ಜಿ ಸೇ-ರಿದಂತೆ ಒಟ್ಟು 2 ಅರ್ಜಿಗಳು ಸಲ್ಲಿಕೆಯಾಗಿವೆ.

ಹುಬ್ಬಳ್ಳಿ ಗ್ರಾಮೀಣ ತಾಲೂಕಿನಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ 2, ಸಮಾಜ ಕಲ್ಯಾಣ ಇಲಾಖೆ 1, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರ ಇಲಾಖೆ 1, ಇಂಧನ ಇಲಾಖೆ 1, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ 2, ವಸತಿ ಇಲಾಖೆ 11, ಲೋಕೋಪಯೋಗಿ ಇಲಾಖೆ 1, ಕಂದಾಯ ಇಲಾಖೆ 7, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 11, ಸಾರಿಗೆ ಇಲಾಖೆ 2 ಹಾಗೂ ಜಲಸಂಪನ್ಮೂಲ ಇಲಾಖೆ 1 ಅರ್ಜಿ ಸೇರಿದಂತೆ ಒಟ್ಟು 40 ಅರ್ಜಿಗಳು ಸ್ವೀಕೃತವಾಗಿವೆ.

ಹುಬ್ಬಳ್ಳಿ ಶಹರ ತಾಲೂಕಿನಲ್ಲಿ ಆಹಾರ ಮತ್ತು ನಾಗ-ರಿಕ ಸರಬರಾಜು ಇಲಾಖೆಯ 2 ಹಾಗೂ ವಸತಿ ಇಲಾಖೆಯ 3 ಅರ್ಜಿಗಳು ಸೇರಿದಂತೆ ಒಟ್ಟು 5 ಅರ್ಜಿಗಳು ಸಲ್ಲಿಕೆಯಾಗಿವೆ.

ಕಲಘಟಗಿ ತಾಲೂಕಿನಲ್ಲಿ ಕೃಷಿ ಇಲಾಖೆ 1, ಪಶುಸಂಗೋಪನೆ ಇಲಾಖೆ 1, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ 2, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ 4, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರ ಇಲಾಖೆ 1, ಇಂಧನ ಇಲಾಖೆ 2, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ 6, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ 1, ಗೃಹ ಇಲಾಖೆ 1, ವಸತಿ ಇಲಾಖೆ 6, ಸಣ್ಣ ನೀರಾವರಿ ಇಲಾಖೆ 1, ಪ್ರಜಾ ಸೇವಾ ಇಲಾಖೆ 1, ಲೋಕೋಪಯೋಗಿ ಇಲಾಖೆ 3, ಕಂದಾಯ ಇಲಾಖೆ 4, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 22 ಹಾಗೂ ಸಾರಿಗೆ ಇಲಾಖೆ 1 ಅರ್ಜಿ ಸೇರಿದಂತೆ ಒಟ್ಟು 57 ಅರ್ಜಿಗಳು ಸ್ವೀಕೃತವಾಗಿವೆ.

ಕುಂದಗೋಳ ತಾಲೂಕಿನಲ್ಲಿ ಕೃಷಿ ಇಲಾಖೆ 1, ಡಿಪಿಎಎಲ್ 2, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ 1, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರ ಇಲಾಖೆ 2, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ 6, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ 1, ವಸತಿ ಇಲಾಖೆ 5, ಸಣ್ಣ ನೀರಾವರಿ ಇಲಾಖೆ 1, ಲೋಕೋಪಯೋಗಿ ಇಲಾಖೆ 1, ಕಂದಾಯ ಇಲಾಖೆ 27, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 23, ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ 1, ಸಾರಿಗೆ ಇಲಾಖೆ 2 ಹಾಗೂ ನಗರಾಭಿವೃದ್ಧಿ ಇಲಾಖೆ 1 ಅರ್ಜಿ ಸೇರಿದಂತೆ ಒಟ್ಟು 73 ಅರ್ಜಿಗಳು ಸಲ್ಲಿಕೆಯಾಗಿವೆ.

ನವಲಗುಂದ ತಾಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ತಲಾ ಒಂದು ಅರ್ಜಿ ಸೇರಿದಂತೆ ಒಟ್ಟು 2 ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಪ್ರಕಟಣೆ ತಿಳಿಸಿದೆ.

#### ಹಣ್ಣು-ಹೂವು, ಮೂರ್ತಿ, ಅಲಂಕಾರಿಕ ವಸ್ತುಗಳ ಖರೀದಿಗೆ ಮಾರುಕಟ್ಟೆಗೆ ಜನಸಾಗರ

## ಬರದ ನಡುವೆಯೂ ಗಣೇಶ ಹಬ್ಬದ ಖರೀದಿ ಭರಾಟೆ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬರಗಾಲದ ಸಂಕಷ್ಟದಿಂದ ರೈತರ ಬದುಕು ಕಮರುತ್ತಿದ್ದರೂ ಗಣೇಶ ಹಬ್ಬದ ಸಂಭ್ರಮಕ್ಕೆ ಮಾತ್ರ ಬರದ ಛಾಯೆ ತಟ್ಟಿಲ್ಲ. ವಿಘ್ನವಿನಾಶಕನ ಸ್ವಾಗತಕ್ಕೆ ಸಜ್ಜಾದ ಜನತೆ ಹಬ್ಬದ ಮುನ್ನಾದಿನವಾದ ಭಾನುವಾರ ಪಟ್ಟಣದ ಮಾರುಕಟ್ಟೆಗೆ ಮುಗಿಬಿದ್ದು ಗಣೇಶ ಮೂರ್ತಿ, ಹೂವು-ಹಣ್ಣು, ತಳಿರು-ತೋರಣ, ದಿನಸಿ ಹಾಗೂ ಅಲಂಕಾರಿಕ ಸಾಮಗ್ರಿಗಳ ಖರೀದಿಯಲ್ಲಿ ತೊಡಗಿದ್ದರು. ಹೊರತಾಲೂಕುಗಳಿಂದಲೂ ಜನರು ಆಗಮಿಸಿದ್ದರಿಂದ ಮಾರುಕಟ್ಟೆ ಜನಜಂಗುಳಿಯಿಂದ ಕಿಕ್ಕಿರಿದು, ವ್ಯಾಪಾರ-ವಹಿವಾಟು ಗರಿಗೆದರಿತು.

ಸೋಮವಾರ ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಭಾನುವಾರ ಪಟ್ಟಣದಲ್ಲಿ ಖರೀದಿ ಭರಾಟೆ ಜೋರಾಗಿತ್ತು. ವಿವಿಧೆಡೆ ಮನೆ ಹಾಗೂ ಸಾರ್ವಜನಿಕ ಗಣೇಶೋತ್ಸವ ಸಮಿತಿಗಳಿಂದ ಮೂರ್ತಿ ಪ್ರತಿಷ್ಠಾಪನೆಗೆ ಸಿದ್ಧತೆಗಳು ಪೂರ್ಣಗೊಂಡಿದ್ದವು. ಯುವಕರು ತಂಡಗಳನ್ನು ರಚಿಸಿಕೊಂಡು ವಿಶೇಷ ಪೂಜೆ, ಅನ್ನಸಂತರ್ಪಣೆ ಹಾಗೂ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲು ಸಜ್ಜಾಗಿದ್ದಾರೆ. ಪರಿಸರ ಸ್ನೇಹಿ ಗಣೇಶ ಮೂರ್ತಿಗಳಿಗೂ ಬೇಡಿಕೆ ಕಂಡುಬಂದಿತು.

ಬೆಲೆ ಏರಿಕೆಯ ನಡುವೆಯೂ ಖರೀದಿ ಜೋರು

ಬರಗಾಲದಿಂದ ಮುಂಗಾರು ಬೆಳೆಗಳು ಕೈಕೊಟ್ಟಿರುವುದು ರೈತರ ಆರ್ಥಿಕ ಸ್ಥಿತಿಗೆ ಹೊಡೆತ ನೀಡಿದೆ. ಬೆಳೆಗಾಗಿ ಮಾಡಿದ ಖರ್ಚು ಮರಳದೆ ಸಂಕಷ್ಟದಲ್ಲಿದ್ದರೂ ಹಬ್ಬದ ಸಂಪ್ರದಾಯವನ್ನು ಕೈಬಿಡಲು ಜನರು ಸಿದ್ಧ-ರಿಲ್ಲ.

ತಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಅಗತ್ಯ ವಸ್ತುಗಳನ್ನು ಖರೀದಿಸಿ ಗಣೇಶ ಹಬ್ಬ ಆಚರಿಸಲು ಮುಂದಾಗಿದ್ದಾರೆ. ಹೂವು, ಬಾಳೆ, ಕಬ್ಬು, ವೀಳ್ಯದೆಲೆ, ದಿನಸಿ ಹಾಗೂ ಅಲಂಕಾರಿಕ ವಸ್ತುಗಳ ಬೆಲೆಯಲ್ಲಿ ಕೊಂಚ ಏರಿಕೆಯಾಗಿತ್ತು. ಡಜನ್ ಬಾಳೆಹಣ್ಣು, ಸೇಬು, ಕಿತ್ತಳೆ, ಚಿಕ್ಕೂ ಹಾಗೂ ಮೋಸಂಬಿ ಒಳಗೊಂಡ ಐದು ಬಗೆಯ ಹಣ್ಣುಗಳ ಸೆಟ್‌ಗೆ ₹150ರಿಂದ ₹200ರವರೆಗೆ ದರವಿತ್ತು.





ಮಾರುಕಟ್ಟೆಯಲ್ಲಿ ಜನಸಂದಣಿ; ಸಂಚಾರ ಅಸ್ತವ್ಯಸ್ತ

ತಾಲೂಕಿನ ವಿವಿಧ ಗ್ರಾಮಗಳಷ್ಟೇ ಅಲ್ಲದೆ ನೆರೆಯ ಕುಂದಗೋಳ, ಶಿರಹಟ್ಟಿ, ಶಿಗ್ಗಾಂವ ಹಾಗೂ ಸವಣೂರು ತಾಲೂಕುಗಳಿಂದಲೂ ಜನರು ವ್ಯಾಪಾರಕ್ಕಾಗಿ ಆಗಮಿಸಿದ್ದ-ರಿಂದ ಪ್ರಮುಖ ಮಾರುಕಟ್ಟೆ ಪ್ರದೇಶ ಜನಸಂದಣಿಯಿಂದ ತುಂಬಿತ್ತು. ವಾಹನ ಸಂಚಾರ ಹೆಚ್ಚಾಗಿ ಟ್ರಾಫಿಕ್ ಕಿರಿಕಿರಿ ಉಂಟಾಗಿದ್ದು, ಪೊಲೀಸರು ಸಂಚಾರ ನಿಯಂತ್ರಣಕ್ಕೆ ಹರಸಾಹಸಪಟ್ಟರು. ಬಸ್ ನಿಲ್ದಾಣದಲ್ಲಿಯೂ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿತ್ತು. ಹಬ್ಬದ ದಿನ ಮತ್ತಷ್ಟು ಜನದಟ್ಟಣೆ ಉಂಟಾಗುವ ಸಾಧ್ಯತೆ ಇರುವುದರಿಂದ ಪುರಸಭೆ ಹಾಗೂ ಪೊಲೀಸ್ ಇಲಾಖೆ ಮುಂಜಾಗ್ರತಾ ಕ್ರಮ ಕೈಗೊಂಡು ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡಬೇಕು ಎಂಬ ಒತ್ತಾಯ ಕೇಳಿಬಂದಿದೆ.

ಪಟ್ಟಣದ ಸೊಪ್ಪಿನಕೇರಿ ಓಣಿಯ ಗಣೇಶ ಮೂರ್ತಿಯನ್ನು ಶನಿವಾರವೇ ಅದ್ದೂರಿ ಮೆರವಣಿಗೆ ಹಾಗೂ ದೀಪಾಲಂಕಾರದೊಂದಿಗೆ ಬರಮಾಡಿಕೊಳ್ಳಲಾಯಿತು. ಹಬ್ಬದ ಸಂದರ್ಭದಲ್ಲಿ ಶಾಂತಿ ಕಾಪಾಡಲು ಪಟ್ಟಣದಲ್ಲಿ ಅಪಾರ ಸಂಖ್ಯೆಯ ಪೊಲೀಸರು ಬೀಡುಬಿಟ್ಟಿದ್ದಾರೆ. ಬರದ ಸಂಕಷ್ಟದ ನಡುವೆಯೂ ವಿಘ್ನವಿನಾಶಕನ ಕೃಪೆಯಿಂದ ಉತ್ತಮ ಮಳೆ ಸುರಿದು ರೈತರ ಬದುಕು ಹಸನಾಗಲಿ, ಸಂಕಷ್ಟಗಳು ದೂರವಾಗಲಿ ಎಂಬ ಆಶಯದೊಂದಿಗೆ ತಾಲೂಕಿನ ಜನತೆ ಗಣೇಶನ ಸ್ವಾಗತಕ್ಕೆ ಸಜ್ಜಾಗಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka